ಸಂಪುಟ : 9 ಸಂಚಿಕೆ 64 ಪುಟ : 4 ಬೆಲೆ: 3.00 ಗುರುವಾರ ಎಪ್ರಿಲ್ 11 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 64 Pages : 4 Price : 3.00 Thursday April 11 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಚುನಾವಣಾ ತರಬೇತಿಗೆ ತಡವಾಗಿ ಬಂದ 126 ಜನರಿಗೆ ನೋಟಿಸ್



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**


ಬುಧವಾರ ಶಿರಹಟ್ಟಿಯ ಶ್ರೀ ಎಸ್‌ಜೆಎಫ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಚುನಾವಣಾ ಸಿಬ್ಬಂದಿಗೆ ಆಯೋಜಿಸಿದ್ದ ಪ್ರಥಮ ಹಂತದ ತರಬೇತಿಗೆ ಸಮಯಕ್ಕೆ ಸರಿಯಾಗಿ ಬಾರದೇ, ತಡವಾಗಿ ಬಂದ 112 ಸಿಬ್ಬಂದಿಗೆ ಮತ್ತು ತರಬೇತಿಗೆ ಗೈರು ಉಳಿದ 14 ಜನ ಸಿಬ್ಬಂದಿ ಸೇರಿದಂತೆ ಒಟ್ಟು 126 ಸಿಬ್ಬಂದಿಗೆ ಶಿರಹಟ್ಟಿಯ ಸಹಾಯಕ ಚುನಾವಣಾಧಿಕಾರಿ ಅಮಿತ ಬಿದರಿ ನೊಟೀಸ್ ಜಾರಿ ಮಾಡಿದ್ದಾರೆ.

ಶಿರಹಟ್ಟಿಯಲ್ಲಿಯ ತರಬೇತಿ ಕೇಂದ್ರಕ್ಕೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಭೇಟಿ ನೀಡಿ ತರಬೇತಿಗೆ ಸಿದ್ದಪಡಿಸಿದ್ದ 14 ಕೊಠಡಿಗಳ ವೀಕ್ಷಣೆ ನಡೆಸುವ ಸಂದರ್ಭದಲ್ಲಿ ಸಿಬ್ಬಂದಿಗಳ ಹಾಜರಾತಿ ಪರಿಶೀಲನೆ ನಡೆಸಿದರು. ಒಟ್ಟು 559 ಹಾಜರಾತಿ ಇರುವುದನ್ನು ಗಮನಿಸಿ, ತಡವಾಗಿ ಆಗಮಿಸುತ್ತಿರುವ ಸಿಬ್ಬಂದಿಗಳನ್ನು ತರಾಟೆಗೆ ತೆಗೆದು-ಕೊಂಡು ಅವರೆಲ್ಲರಿಗೂ ನೋಟೀಸ್ ಜಾರಿ ಮಾಡುವಂತೆ ಸಹಾಯಕ ಚುನಾವಣಾಧಿಕಾರಿಗೆ ನಿರ್ದೇಶನ ನೀಡಿ ತೆರಳಿದರು. ತದನಂತರ ಸಹಾಯಕ ಚುನಾವಣಾಧಿಕಾರಿ ಸಿಬ್ಬಂದಿಗಳಿಗೆ ಸ್ಥಳದಲ್ಲಿಯೇ ನೋಟಿಸ್ ನೀಡಿದ್ದಾರೆ.

ತಹಸೀಲ್ದಾರ ಅನಿಲ ಬಡಿಗೇರ ಮಾತನಾಡಿ, ತರಬೇತಿಗೆ ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಎಲ್ಲ ಎಆರ್‌ಓ ಮತ್ತು ಪಿಆರ್‌ಓಗಳಿಗೆ ತಿಳಿಸಲಾಗಿತ್ತು. ಆದಾಗ್ಯೂ ಸಮಯಕ್ಕೆ ಸರಿಯಾಗಿ ಬಾರದೇ ಇದ್ದುದರಿಂದ ಹಾಗೂ ಜಿಲ್ಲಾಧಿಕಾರಿ ಅವರು ಭೇಟಿ ನೀಡಿದ ಸಂದರ್ಭದಲ್ಲಿ ತಡವಾಗಿ ಬರುತ್ತಿರುವ ಸಿಬ್ಬಂದಿಗಳ ಕಾರ್ಯದಕ್ಷತೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ, ಅವರೆಲ್ಲರಿಗೂ ನೊಟೀಸ್ ನೀಡುವಂತೆ ತಿಳಿಸಿದ್ದಾರೆ. ತರಬೇತಿಗೆ ಹಾಜರಾಗುವ ಸಿಬ್ಬಂದಿಗಳಿಗೆ ಸಮರ್ಪಕ ಊಟ ಸೇರಿದಂತೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಲಾಗಿತ್ತು ಎಂದರು.

## ನರಗುಂದದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಸಚಿವ ಶಿವಾನಂದ ಪಾಟೀಲ ವಿಶ್ವಾಸ

# ಕಾಂಗ್ರೆಸ್ ಹೆಚ್ಚಿನ ಸ್ಥಾನ ಗಳಿಸಲಿದೆ



**■ವಿಜಯಸಾಕ್ಷಿ ಸುದ್ದಿ, ನರಗುಂದ**

ಕಳಸಾ ಬಂಡೂರಿಗಾಗಿ ನರಗುಂದದಲ್ಲಿಯೇ ಈ ಹಿಂದೆ ಹೋರಾಟ ನಡೆಸಿದ್ದ ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಗಳಾದ ಸಂದರ್ಭದಲ್ಲಿಯೂ ಈ ಯೋಜನೆ ಜಾರಿ ಮಾಡಲಿಲ್ಲ. ಈ ಹಿಂದೆ ಯಡಿಯೂರಪ್ಪ ಅವರು ಮುಖ್ಯಮಂತ್ರಿಗಳಾಗಿದ್ದಾಗ ನೂರಾರು ಕೋಟಿ ರೂ ಕಳಸಾ ಬಂಡೂರಿಗಾಗಿ ಅನುದಾನ ತೆಗೆದಿರಿಸಲಾಗಿದೆ ಎಂದು ಹೇಳಿದವರೂ ಈ ಯೋಜನೆ ಜಾರಿಯಾಗಲಿಲ್ಲ. ಇದು ಬಿಜೆಪಿ ಪಕ್ಷವರು ಆಡಳಿತ ನಡೆಸುವ ಪರಿಯಾಗಿದೆ ಎಂದು ಸಚಿವ ಶಿವಾನಂದ ಪಾಟೀಲ ಬಿಜೆಪಿ ಪಕ್ಷದ ನೀತಿಗಳನ್ನು ಟೀಕೆ ಮಾಡಿದರು.

ನರಗುಂದದ ಬಸವೇಶ್ವರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ನಾಲ್ಕು ಬಾರಿ ಆಯ್ಕೆಯಾದ ಬಾಗಲಕೋಟ ಕ್ಷೇತ್ರದ ಸಂಸದ ಪಿ.ಸಿ. ಗದ್ದಿಗೌಡ್ರ ಮತ್ತು ಈ ರಾಜ್ಯದ ಬಿಜೆಪಿ ಸಂಸದರು ಒಮ್ಮೆಯೂ ಕಳಸಾ ಬಂಡೂರಿ, ಮಹದಾಯಿ ಯೋಜನೆ ಅನುಷ್ಠಾನಕ್ಕಾಗಿ ಹಾಗೂ ರಾಜ್ಯದ ಅಭಿವೃದ್ಧಿಗಾಗಿ ಒಂದು ಪ್ರಶ್ನೆಯನ್ನೂ ಸಂಸದ ಕಲಾಪದಲ್ಲಿ ಕೇಳಲಿಲ್ಲ. ಇದು ಜನತೆಯ ಸ್ಮರಣೆಯಲ್ಲಿದೆ ಎಂದು ಪಾಟೀಲ ವ್ಯಂಗವಾಡಿದರು.

ಇತರ ರಾಜ್ಯಗಳಿಗಿಂತ ಕೇಂದ್ರಕ್ಕೆ ಕರ್ನಾಟಕ ಹೆಚ್ಚಿನ ತೆರಿಗೆ ನೀಡುತ್ತಿದೆ. ಆದರೆ ಕೇಂದ್ರ ಸರ್ಕಾರ ಕಡಿಮೆ ಅನುದಾನ ನೀಡಿ ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿಯಾಗಿದೆ. ಇಬ್ಬರು ಮುಖ್ಯಮಂತ್ರಿಗಳನ್ನು ಜೈಲಿನಲ್ಲಿರಿಸಿ ಮೋದಿ ಸಂಸತ್ ಚುನಾವಣೆ ಪ್ರಚಾರ ಮಾಡುತ್ತಿದ್ದಾರೆ. 75 ವರ್ಷಗಳ ಅವಧಿಯಲ್ಲಿ ಇಂತಹ ಕೆಟ್ಟ ಪರಿಸ್ಥಿತಿ ದೇಶಕ್ಕೆ ಬಂದಿರಲಿಲ್ಲ. 300 ಟಿಎಂಸಿ ಕೃಷ್ಣಾ ನೀರು ಸಮುದ್ರಕ್ಕೆ ವ್ಯರ್ಥವಾಗಿ ಹರಿಯುತ್ತಿದೆ. ಮೇಕೇದಾಟು ಮತ್ತು ಕಾವೇರಿ ನೀರಿನ ವಿವಾದಗಳನ್ನು ಪರಿಹರಿಸುವಲ್ಲಿ ಕೇಂದ್ರ ಸರಕಾರ ಏನನ್ನೂ ಮಾಡಿಲ್ಲ ಎಂದು ದೂರಿದರು.

ಅಭ್ಯರ್ಥಿ ಸಂಯುಕ್ತಾ ಪಾಟೀಲ ಮಾತನಾಡಿ, ಬಂಡವಾಳ ಶಾಹಿಗಳ 1.78 ಲಕ್ಷ ಸಾವಿರ ಕೋಟಿ ರೂ ಸಾಲ ಮನ್ನಾ ಮಾಡುವ ಕೇಂದ್ರ ಸರಕಾರ, ರೈತರು ತೊಂದರೆ ಅನುಭವಿಸುತ್ತಿದ್ದರೂ ಅವರ ಸಾಲ ಮನ್ನಾ ಮಾಡಿಲ್ಲ. 14 ಸಾವಿರ ಕೋಟಿ ರೂ ವಾಣಿಜ್ಯದಾರರ ಸಾಲ ಮನ್ನಾ ಕೇಂದ್ರದಿಂದ ನಡೆದಿದೆ. ಇಂತಹ ಸಮಸ್ಯೆಗಳಿಗೆ ಸರಿಯಾದ ಪರಿಹಾರ ಕೇಂದ್ರದಿಂದ ದೊರೆತಿಲ್ಲ. ನಿಮ್ಮ ಮನೆ ಮಗಳು ಈ ಬಾರಿ ಬಾಗಲಕೋಟ ಕ್ಷೇತ್ರದಿಂದ ಲೋಕಸಭೆಗೆ ಚುನಾವಣೆಗೆ ಸ್ಪರ್ಧಿಸಿದ್ದೇನೆ. ರಾಜ್ಯದ ಸಮಗ್ರ ಅಭಿವೃದ್ಧಿಗಾಗಿ ಮತ ನೀಡಿ ಎಂದು ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಮಾಜಿ ಶಾಸಕ ಬಿ.ಆರ್. ಯಾವಗಲ್ ಮಾತನಾಡಿ, ಮೋದಿ ಸರಕಾರ ರೈತರ ಕುರಿತು ಚಿಂತನೆ ಮಾಡುತ್ತಿಲ್ಲ. 15 ಲಕ್ಷ ಬಡವರಿಗಾಗಿ ಮನೆಗಳನ್ನು ನೀಡುವುದಾಗಿ ಘೋಷಿಸಿದ್ದ ಈ ಹಿಂದಿನ ಬಿಜೆಪಿ ಸರಕಾರ ಏನನ್ನೂ ಮಾಡಲಿಲ್ಲವೆಂದು ಟೀಕಿಸಿದರು.

ವೇದಿಕೆ ಮೇಲೆ ಅಪನಗೌಡ ನಾಯ್ಕರ್, ಚನ್ನಬಸಪ್ಪ ಕಂಠಿ, ಎಂ.ಎಸ್. ಪಾಟೀಲ, ಉಮಾ ದ್ಯಾವನೂರ, ಶಾರದಾ ಹಿರೇಗೌಡ್ರ, ತೇಜಾಕ್ಷಿ ಮಾನೆ, ವಿಠಲ ಶಿಂಧೆ, ಪ್ರವೀಣ ಯಾವಗಲ್, ವಿವೇಕ ಯಾವಗಲ್, ಬಾಬೂ ಹಿರೇಹೊಳಿ, ಟಿ.ಬಿ. ಸಿರಿಯಪ್ಪಗೌಡ್ರ, ಪ್ರಕಾಶ ಕರಿ, ನೀಲಕಂಠ ಅಸೂಟಿ, ಕೃಷ್ಣಪ್ಪ ಜೋಗಣ್ಣವರ, ವಿಷ್ಣು ಸಾಠೆ, ಪ್ರಕಾಶ ಹಡಗಲಿ, ರಾಮಕೃಷ್ಣ ಗೊಂಬೆ, ದ್ಯಾಮಣ್ಣ ಕಾಡಪ್ಪನವರ, ದ್ಯಾಮಣ್ಣ ಸವದತ್ತಿ, ರವಿ ಹಿರೇಮಠ, ಬಿ.ಸಿ. ಹೆಬ್ಬಳ್ಳಿ, ಎಂ.ಬಿ. ಮೆಣಸಗಿ, ರಾಜುಗೌಡ ಕೆಂಚನಗೌಡ್ರ, ಎಫ್.ವೈ. ದೊಡಮನಿ, ಎಂ.ಬಿ. ಕೊಳೇರಿ, ಪಾರಸ್ ಜೈನ್, ಸತ್ಯಜೀತ ಪಾಟೀಲ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು. ರಾಜು ಕಲಾಲ ನಿರ್ವಹಿಸಿದರು.

> ಈ ಬಾರಿಯ ಸಂಸತ್ ಚುನಾವಣೆಯಲ್ಲಿ ಮೋದಿ ಹವಾ ಇಲ್ಲ. ಈ ಬಾರಿ ಸಂಸತ್‌ನಲ್ಲಿ ಕಾಂಗ್ರೆಸ್ ಹೆಚ್ಚಿನ ಸ್ಥಾನ ಗಳಿಸಲಿದೆ. ಬಾಗಲಕೋಟ ಕ್ಷೇತ್ರದ ಸಂಸದ ಚುನಾವಣೆಗೆ ಕಾಂಗ್ರೆಸ್‌ನಿಂದ ಸಂಯುಕ್ತ ಪಾಟೀಲ ಸ್ಪರ್ಧಿಸಿದ್ದಾರೆ. ಅವರು ಆಯ್ಕೆಗೊಂಡು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಮಾಡುವಲ್ಲಿ ಹೆಚ್ಚಿನ ಶ್ರಮ ತೆಗೆದುಕೊಳ್ಳಲಿದ್ದಾರೆಂದು ಸಚಿವ ಶಿವಾನಂದ ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು.

> ಸಚಿವ ಆರ್.ಬಿ. ತಿಮ್ಮಾಪೂರ, ಜಮಖಂಡಿ ಮಾಜಿ ಶಾಸಕ ಆನಂದ ನ್ಯಾಮಗೌಡ್ರ, ಬದಾಮಿ ಶಾಸಕ ಭೀಮಶೇನ ಚಿಮ್ಮನಕಟ್ಟಿ, ಅಜಯಕುಮಾರ ಸರನಾಯ್ಕರ್, ಎಸ್.ಆರ್. ಪಾಟೀಲ, ಡಿ.ಅರ್. ಪಾಟೀಲ, ಜೆ.ಟಿ. ಪಾಟೀಲ, ರಕ್ಷೀತಾ ಈಟಿ, ಸೌದಾಗರ, ನಂಜಯ್ಯನಮಠ ಮಾತನಾಡಿದರು. ನಿಂಗಬಸಪ್ಪ ಬಾಗದೂರ, ಪರಸಪ್ಪ ಲಮಾಣಿ, ವೆಂಕಟೇಶ ಲಮಾಣಿ ಸೇರಿದಂತೆ ಅನೇಕರು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಗೊಂಡರು.

## ಅಡವಿಸೋಮಾಪುರ ಗ್ರಾಮ ಪಂಚಾಯಿತಿಗೆ ಜಿ.ಪಂ. ಸಿ.ಇ.ಓ ಭೇಟಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಸ್ ಭರತ್ ಅವರು ಬುಧವಾರ ಅಡವಿಸೋಮಾಪುರ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ಗ್ರಾಮ ಪಂಚಾಯತಿ ವ್ಯಾಪ್ತಿಯ ಶಾಲಾ ಶೌಚಾಲಯ, ಶಾಲಾ ಕಟ್ಟಡ, ದೊಡ್ಡ ತಾಂಡಾ ವ್ಯಾಪ್ತಿಯ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ ವೀಕ್ಷಿಸಿದರು.

ಈ ಸಂದರ್ಭದಲ್ಲಿ ತಾ.ಪಂ.ಇ.ಓ ಸಹಾಯಕ ನಿರ್ದೇಶಕರು (ಗ್ರಾ.ಉ), ಪಿಡಿಒ, ಪಂಚಾಯತ್ ಸಿಬ್ಬಂದಿಗಳು ಹಾಜರಿದ್ದರು.

## ದ್ವಿತೀಯ ಪಿಯು ಫಲಿತಾಂಶದಲ್ಲಿ ಗದಗ ಜಿಲ್ಲೆಗೆ 32ನೇ ಸ್ಥಾನ

# ಕುಸಿತ ಕಂಡ ಜಿಲ್ಲೆಯ ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯಾದ್ಯಂತ ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟವಾಗಿದ್ದು, ಕಳೆದ ಬಾರಿ 30ನೇ ಸ್ಥಾನ ದಾಖಲಿಸಿದ್ದ ಗದಗ ಜಿಲ್ಲೆ, ಈ ಬಾರಿ 32ನೇ ಸ್ಥಾನಕ್ಕೆ ಕುಸಿಯುವ ಮೂಲಕ ರಾಜ್ಯಮಟ್ಟದಲ್ಲಿ ಕೊನೆಯ ಸ್ಥಾನದಲ್ಲಿದೆ. ತನ್ಮೂಲಕ ಸತತ ಮೂರು ವರ್ಷಗಳಿಂದಲೂ ಕಳಪೆ ಸಾಧನೆಯತ್ತ ಸಾಗುತ್ತಿದೆ.

ಈ ವರ್ಷದ ಫಲಿತಾಂಶದಲ್ಲಿ ಗದಗ ಜಿಲ್ಲೆ ಶೇ. 72.86 ಫಲಿತಾಂಶ ದಾಖಲಿಸಿದೆ. ಕಳೆದ ವರ್ಷದ ಫಲಿತಾಂಶ ಶೇ. 66.91 ಆಗಿತ್ತು. ಹೀಗಾಗಿ, ಒಟ್ಟಾರೆ ಫಲಿತಾಂಶದಲ್ಲಿ ಪ್ರಗತಿಯಾಗಿಲ್ಲ. ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕಿನ ಆದರಹಳ್ಳಿ ತಾಂಡಾದ ನಿವಾಸಿ, ಧಾರವಾಡ ಕೆಇ ಬೋರ್ಡ್ ಪಿಯು ಕಾಲೇಜಿನ ವಿದ್ಯಾರ್ಥಿನಿ ರವಿನಾ ಸೋಮಪ್ಪ ಲಮಾಣಿ ಕಲಾ ವಿಭಾಗದಲ್ಲಿ 600ಕ್ಕೆ 595 ಅಂಕ ಪಡೆಯುವ ಮೂಲಕ ರಾಜ್ಯಮಟ್ಟದಲ್ಲಿ ದ್ವಿತೀಯ ಸ್ಥಾನ ಪಡೆದು ಜಿಲ್ಲೆಗೆ ಕೀರ್ತಿ ತಂದಿದ್ದು, ಈ ಬಾರಿಯೂ ಬಾಲಕಿಯರೇ ಮೇಲುಗೈ ಸಾಧಿಸಿದ್ದಾರೆ.

2023-24ರ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಗೆ ಜಿಲ್ಲೆಯಲ್ಲಿ 4834 ಗಂಡು ಮಕ್ಕಳು, 5836 ಹೆಣ್ಣುಮಕ್ಕಳು ಸೇರಿದಂತೆ ಒಟ್ಟು 10670 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದರು. ಇವುಗಳಲ್ಲಿ 3043 ಗಂಡು ಮಕ್ಕಳು, 4731 ಹೆಣ್ಣು ಮಕ್ಕಳು ಸೇರಿ ಒಟ್ಟು 7774 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದಾರೆ. ಒಟ್ಟಾರೆ ಶೇ. 62.94ರಷ್ಟು ಗಂಡು ಮಕ್ಕಳು ಉತ್ತೀರ್ಣರಾಗಿದ್ದರೆ, ಶೇ. 81.06ರಷ್ಟು ಹೆಣ್ಣುಮಕ್ಕಳು ಉತ್ತೀರ್ಣರಾಗಿದ್ದಾರೆ.

> ಜಿಲ್ಲೆಯ ದ್ವಿತೀಯ ಪಿಯು ಫಲಿತಾಂಶ ಮತ್ತೊಮ್ಮೆ ಕುಸಿತ ಕಂಡಿರುವುದು ಬೇಸರ ತಂದಿದೆ. ಫಲಿತಾಂಶ ಕುಸಿತಕ್ಕೆ ಅನೇಕ ಕಾರಣಗಳಿದ್ದು, ಆ ಬಗ್ಗೆ ಅವಲೋಕನ ನಡೆಸಿ, ಭವಿಷ್ಯದಲ್ಲಿ ಉತ್ತಮ ಫಲಿತಾಂಶ ಸಾಧಿಸಲು ಮತ್ತು ಸುಧಾರಣೆಗೆ ಇನ್ನಷ್ಟು ಕಠಿಣ ಪ್ರಯತ್ನ ಮಾಡಲಾಗುವುದು.
>
> **– ಜಿ.ಎಂ. ಕುರ್ತಕೋಟಿ.**
>
> ಉಪನಿರ್ದೇಶಕರು, ಪ.ಪೂ ಶಿಕ್ಷಣ ಇಲಾಖೆ, ಗದಗ.

## ಪತ್ರಿಕಾಗೋಷ್ಠಿಯಲ್ಲಿ ಜೆಡಿಎಸ್ ವಕ್ತಾರ ವಿ.ಆರ್. ಗೋವಿಂದಗೌಡ್ರ

# ದಿಂಗಾಲೇಶ್ವರ ಶ್ರೀಗಳು ಪರಂಪರೆಯನ್ನು ಅರಿಯಲಿ




**■ವಿಜಯಸಾಕ್ಷಿ ಸುದ್ದಿ, ಗದಗ**

ಶಿರಹಟ್ಟಿಯ ಫಕ್ಕೀರೇಶ್ವರ ಮಠಕ್ಕೆ ಐತಿಹಾಸಿಕ ಹಿನ್ನೆಲೆಯಿದೆ. ಅದಕ್ಕೆ ಅದರದ್ದೇ ಆದ ಪರಂಪರೆಯೂ ಇದೆ. ಈ ಕಾರಣದಿಂದ ಫಕ್ಕೀರ ದಿಂಗಾಲೇಶ್ವರ ಶ್ರೀಗಳು ಚುನಾವಣೆಗೆ ಸ್ಪರ್ಧೆ ಮಾಡುವ ಪೂರ್ವದಲ್ಲಿ ಮಠವನ್ನು ತ್ಯಜಿಸಬೇಕು ಎಂದು ಜೆಡಿಎಸ್ ರಾಜ್ಯ ವಕ್ತಾರ ವಿ.ಆರ್. ಗೋವಿಂದಗೌಡ್ರ ಹೇಳಿದರು.

ಬುಧವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯುನ್ನುದ್ದೇಶಿಸಿ ಮಾತನಾಡಿದ ಅವರು, ಶ್ರೀಗಳು ಚುನಾವಣೆಗೆ ಸ್ಪರ್ಧಿಸಲು ಯಾರ ವಿರೋಧವೂ ಇಲ್ಲ. ಆದರೆ ಅವರು ತಕ್ಷಣ ಮಠವನ್ನು ತ್ಯಜಿಸಬೇಕು. ಇಲ್ಲವಾದಲ್ಲಿ ನಾಡಿನಾದ್ಯಂತ ಇರುವ ಭಕ್ತರೊಂದಿಗೆ ಚರ್ಚಿಸಿಯೇ ಮುಂದಿನ ಹೋರಾಟವನ್ನು ರೂಪಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಚುನಾವಣೆಗೆ ಯಾರು ಬೇಕಾದರೂ ಸ್ಪರ್ಧಿಸಬಹುದು. ಆದರೆ ದಿಂಗಾಲೇಶ್ವರ ಶ್ರೀಗಳು ಒಂದು ಮಠದ ಪೀಠಾಧಿಪತಿಯಾಗಿ ಆ ಮಠದ ಪರಂಪರೆಯನ್ನು ಅರ್ಥ ಮಾಡಿಕೊಳ್ಳಬೇಕು. ಶ್ರೀಗಳು ಮೊದಲಿನಿಂದಲೂ ಕಾಂಗ್ರೆಸ್ ಪರವಾಗಿದ್ದಾರೆ. ಶ್ರೀಗಳ ಸ್ಪರ್ಧೆ ಕುರಿತು ಕಾಂಗ್ರೆಸ್ ನಾಯಕರು ಹೇಳಿಕೆಗಳನ್ನು ಗಮನಿಸಿದಾಗ, ವಿನೋದ ಅಸೂಟಿ ಅವರ ಬದಲಾಗಿ ಶ್ರೀಗಳನ್ನೇ ಕಣಕ್ಕಿಳಿಸುವ ಪ್ರಯತ್ನ ನಡೆಯುತ್ತಿರುವುದು ಸ್ಪಷ್ಟವಾಗಿದೆ ಎಂದರು.

▸▸3ನೇ ಪುಟಕ್ಕೆ

## ಲಕ್ಷ್ಮೇಶ್ವರದ ಆದರಹಳ್ಳಿ ತಾಂಡಾದ ರವಿನಾ ರಾಜ್ಯಕ್ಕೆ 2ನೇ ರ‍್ಯಾಂಕ್

# ಬಡತನದಲ್ಲೂ ಸಾಧನೆ ಮೆರೆದ ರವಿನಾ



**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಬುಧವಾರ ಪ್ರಕಟಗೊಂಡ ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಲಕ್ಷ್ಮೇಶ್ವರ ತಾಲೂಕಿನ ಆದರಹಳ್ಳಿ ತಾಂಡಾದ ರವಿನಾ ಸೋಮಪ್ಪ ಲಮಾಣಿ ಕಲಾ ವಿಭಾಗದಲ್ಲಿ 600ಕ್ಕೆ 595 ಅಂಕಗಳನ್ನು ಪಡೆಯುವುದರ ಮೂಲಕ ರಾಜ್ಯಕ್ಕೆ 2ನೇ ರ‍್ಯಾಂಕ್ ಗಳಿಸುವುದರ ಮೂಲಕ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ರವಿನಾ ತಂದೆ ಸೋಮಪ್ಪ ಲಮಾಣಿ ಅವರು ಆದರಹಳ್ಳಿ ಗ್ರಾಮದಲ್ಲಿ ಕೇವಲ ಒಂದೂವರೆ ಎಕರೆ ಕೃಷಿ ಭೂಮಿಯನ್ನು ಹೊಂದಿದ್ದಾರೆ. ತಮ್ಮ ಮಕ್ಕಳಿಗೆ ಶಿಕ್ಷಣ ಕಲ್ಪಿಸುವುದಕ್ಕಾಗಿ ತಂದೆ-ತಾಯಿ ಹಗಲಿರುಳು ಕೃಷಿ ಚಟುವಟಿಕೆಯಲ್ಲಿ ನಿರತರಾಗಿದ್ದಾರೆ. ರವಿನಾ 1ರಿಂದ 6ನೇ ತರಗತಿಯನ್ನು ಆದರಹಳ್ಳಿಯ ಸರಕಾರಿ ಶಾಲೆಯಲ್ಲಿ, 8-9ನೇ ತರಗತಿಯನ್ನು ಡಂಬಳದ ರಾಣಿ ಚೆನ್ನಮ್ಮ ವಸತಿ ಶಾಲೆಯಲ್ಲಿ ಮತ್ತು 10ನೇ ತರಗತಿಯನ್ನು ಘು.ಬಡ್ನಿಯಲ್ಲಿ ವ್ಯಾಸಂಗ ಮಾಡಿದ್ದಾರೆ. ತದನಂತರ ಪಿಯುಸಿ ಪ್ರಥಮ ವರ್ಷಕ್ಕೆ ಕೆಇ ಬೋರ್ಡ್ ಧಾರವಾಡ ಕಾಲೇಜಿನಲ್ಲಿ ಪ್ರವೇಶಾತಿ ಪಡೆದುಕೊಂಡು ನಿತ್ಯವೂ 6-7 ಗಂಟೆಗಳ ಅಭ್ಯಾಸ ನಡೆಸುವುದರ ಮೂಲಕ ರ‍್ಯಾಂಕ್ ಗಳಿಸುವತ್ತ ಚಿತ್ತ ಹರಿಸಿದ್ದಾರೆ.

ಕೇಂದ್ರ ಲೋಕಸೇವಾ ಆಯೋಗ ನಡೆಸುವ ಐಎಎಸ್ ಮತ್ತು ಐಪಿಎಸ್ ಸೇರಿದಂತೆ ಯುಪಿಎಸ್‌ಸಿ ಪರೀಕ್ಷೆಗೆ ಹಾಜರಾಗಿ ಅಲ್ಲಿಯೂ ಸಹ ಉತ್ತಮ ಅಂಕಗಳನ್ನು ಪಡೆದು ಉನ್ನತ ಅಧಿಕಾರಿಯಾಗುವ ಆಸೆ ಇರುವುದಾಗಿ ರವಿನಾ ಪತ್ರಿಕೆಗೆ ತಿಳಿಸಿದ್ದಾರೆ.

> **ಅಭಿನಂದನೆಗಳ ಮಹಾಪೂರ**
>
> ರವಿನಾ ಲಮಾಣಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿ ರಾಜ್ಯಕ್ಕೆ ರ‍್ಯಾಂಕ್ ಬರುತ್ತಿದ್ದಂತೆಯೇ ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ಶಾಸಕ ಡಾ. ಚಂದ್ರು ಲಮಾಣಿ ಸೇರಿದಂತೆ ನೂರಾರು ಜನ ಅಭಿನಂದನೆಗಳ ಮಹಾಪೂರವನ್ನೇ ಹರಿಸುತ್ತಿದ್ದಾರೆ.

## ಸಂಪಾದಕೀಯ

# ಜಾತಿ ನೋಡಿ ಟಿಕೆಟ್ ಕೊಟ್ಟಿದ್ದು ಯಾಕೆ?

ಧಾರವಾಡ ಲೋಕಸಭಾ ಕ್ಷೇತ್ರದಿಂದ ದಿಂಗಾಲೇಶ್ವರ ಸ್ವಾಮೀಜಿ ಸ್ವತಂತ್ರ ಅಭ್ಯರ್ಥಿಯಾಗಿ ಸ್ಪರ್ಧಿಸುವುದು ನಿಶ್ಚಯವಾಗುತ್ತಿದ್ದಂತೆ ಸಂಸದ ಪ್ರಹ್ಲಾದ್ ಜೋಶಿ, ಚುನಾವಣೆಯಲ್ಲಿ ಜಾತಿ ನಡೆಯುವುದಿಲ್ಲ ಎನ್ನುವ ಹೇಳಿಕೆಯನ್ನ ದಾಖಲಿಸಿದ್ದಾರೆ.

2024ರ ಚುನಾವಣೆ ಜಾತಿ ಆಧಾರದಲ್ಲಿ ನಡೆಯುವುದಿಲ್ಲ. ಅಭಿವೃದ್ಧಿಯೆ ಚುನಾವಣೆಗೆ ಮಾನದಂಡ ಎನ್ನುವ ಹೇಳಿಕೆ ನೀಡಿರುವುದರ ಹಿಂದೆ ಸೋಲಿನ ಭೀತಿ ಸುಳಿದಾಡುತ್ತಿರುವುದು ಸ್ಪಷ್ಟವಾಗುತ್ತಿದೆ.

ಧಾರವಾಡ ಕ್ಷೇತ್ರದಿಂದ ಯಾವಾಗ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧಿಸುವ ಬೆದರಿಕೆ ಒಡ್ಡಿದರೊ ಆಗಿನಿಂದ ಜೋಶಿ ಅವರಿಗೆ ಲಿಂಗಾಯತರ ಭಯ ಶುರುವಾಗಿದೆ. ಧಾರವಾಡ ಕ್ಷೇತ್ರದಲ್ಲಿ ನಿರ್ಣಾಯಕವಾಗಿರುವ ಲಿಂಗಾಯತ ಮತಗಳು ಕೈ ಕೊಟ್ಟರೆ ಜೋಶಿ ಸಂಸತ್ ಪ್ರವೇಶಿಸುವುದು ಕಷ್ಟವಾಗಲಿದೆ.

ಹೀಗಾಗಿ ಜೋಶಿ ಅವರು, ಈ ಬಾರಿಯ ಲೋಕಸಭೆ ಚುನಾವಣೆಯಲ್ಲಿ ಜಾತಿ ನೋಡಿ ಮತ ಹಾಕುವುದಿಲ್ಲ ಎನ್ನುವ ಹೇಳಿಕೆ ನೀಡಲು ಕಾರಣವಾಯಿತು. ಸರಿ ಮತದಾರರು ಜಾತಿ ನೋಡಿ ಮತ ಹಾಕುವುದಿಲ್ಲ ಎನ್ನುವುದಾದರೆ, ಬಿಜೆಪಿ ಜಾತಿ ನೋಡಿ ಟಿಕೆಟ್ ಕೊಟ್ಟಿದ್ದು ಯಾಕೆ ಎನ್ನುವ ಬಗ್ಗೆಯೂ ಜೋಶಿ ಅವರು ಮಾತಾಡಬೇಕಲ್ಲವೇ?

ಜಾತಿ ನೋಡಿ ಮತ ಹಾಕುವುದಿಲ್ಲ ಎನ್ನುವುದಾದರೆ, ಕ್ಷೇತ್ರದ ಬಹುಸಂಖ್ಯಾತ ಲಿಂಗಾಯತ ಮತದಾರರು ತಮ್ಮನ್ನು ಬೆಂಬಲಿಸುತ್ತಾರೆ ಎಂದು ಹೇಳಿಕೊಳ್ಳಲಿ. ಲಿಂಗಾಯತರು ಯಾವುದೇ ಕಾರಣಕ್ಕೂ ರಾಜಕೀಯದ ಅನುಭವ ಇಲ್ಲದಿರುವ ದಿಂಗಾಲೇಶ್ವರ ಶ್ರೀಗಳಿಗೆ ಬೆಂಬಲಿಸುವುದಿಲ್ಲ ಎಂದು ಬಹಿರಂಗವಾಗಿ ಹೇಳಿಕೊಳ್ಳಲು ಸಾಧ್ಯವೇ ಒಂದು ಕ್ಷಣ ಯೋಚಿಸಿ.

ರಾಜಕೀಯ ನಿಂತಿರುವುದೇ ಜಾತಿ ಮೇಲೆ. ಅದರಲ್ಲೂ ಕರ್ನಾಟಕದ ರಾಜಕಾರಣ ಎರಡು ಪ್ರಬಲ ಸಮುದಾಯಗಳ ಮೇಲೆ ನಿಂತಿದೆ. ಇದು ಜೋಶಿ ಅವರಿಗೂ ಗೊತ್ತು. ಆ ಸಮುದಾಯಕ್ಕೆ ಸೇರಿಲ್ಲ ಎನ್ನುವ ಕಾರಣಕ್ಕೆ ಈ ಬಾರಿ ಬಿ.ಎಲ್. ಸಂತೋಷ ಅವರನ್ನು ಹತ್ತಿರಕ್ಕೂ ಬಿಟ್ಟುಕೊಂಡಿಲ್ಲ ಎನ್ನುವ ಸತ್ಯ ಜೋಶಿ ಅವರಿಗೆ ತಿಳಿದಿದೆ.

ಹೌದು, ಜಾತಿ ನೋಡಿ ಜನ ಮತ ಹಾಕಬಾರದು ನಿಜ. ಆದರೆ ಜಾತಿ ನೋಡಿ ಮತ ಹಾಕುವಂತೆ ಅನಿವಾರ್ಯತೆ ಸೃಷ್ಟಿಸಿರುವುದು ಸಹ ಇದೇ ರಾಜಕಾರಣಿಗಳೇ. ಈಗ ಜಾತಿ ನೋಡಿ ಮತ ಹಾಕಲ್ಲ ಎನ್ನುವುದು ಹಾಸ್ಯಾಸ್ಪದ ಎನಿಸುತ್ತದೆ.

### ಇಸ್ಲಾಮಿನ ಧಾರ್ಮಿಕ, ಸಾಂಪ್ರದಾಯಿಕ ವಿಧಿ-ವಿಧಾನಗಳ ಪಾಲನೆಯೊಂದಿಗೆ ಆಚರಿಸುವ ವ್ರತ

# ಸೌಹಾರ್ದತೆ ಸಾರುವ ರಂಜಾನ್ ಹಬ್ಬ



ಈ ಜಗತ್ತಿನಲ್ಲಿ ವಿವಿಧ ಭಾಷೆಗಳನ್ನು ಮಾತನಾಡುವ ಅನೇಕ ಸಮುದಾಯಗಳ ಜನರು, ತಮ್ಮದೇ ಆದ ವೇಷ-ಭೂಷಣಗಳಿಂದ ಪಾರಂಪರಿಕ ಸಂಸ್ಕೃತಿ, ಸಂಪ್ರದಾಯಗಳಿಂದ ಗುರುತಿಸಿಕೊಂಡಿರುವ ಹಾಗೆ ವಿವಿಧ ಧರ್ಮಗಳನ್ನು ಪಾಲಿಸುವ ಮೂಲಕ ಮತ್ತು ಧಾರ್ಮಿಕ ದೇವಾನುದೇವತೆಗಳನ್ನು ಪೂಜಿಸುವ ವಿಶೇಷವಾಗಿ ಕಾಣುತ್ತಾರೆ. ಅದೆಷ್ಟೇ ಆಧುನಿಕ ದೇಶವಾದರೂ ಅಲ್ಲಿನ ಜನತೆ ಯಾವುದಾದರೂ ಒಂದು ಧರ್ಮವನ್ನು ನಂಬಿಕೊಂಡು ಬಂದಿರುತ್ತಾರೆ.

ಇಸ್ಲಾಂ ಧರ್ಮದ ಅನುಯಾಯಿಗಳನ್ನು ಮುಸ್ಲಿಮರು ಎಂದು ಕರೆಯಲಾಗುತ್ತದೆ. ಮುಸ್ಲಿಮರು ಎಂದರೆ ದೇವರ ಇಚ್ಛೆಗೆ ಶರಣಾದವರು ಎಂದರ್ಥ. ಕ್ರೈಸ್ತ ಧರ್ಮದ ನಂತರ ಇಸ್ಲಾಂ ಧರ್ಮವು ಜಗತ್ತಿನ 2ನೇ ಅತಿ ದೊಡ್ಡ ಧರ್ಮವೂ ಹೌದು.

ಮುಸಲ್ಮಾನರು 'ಖುರಾನ' ಗ್ರಂಥವನ್ನು ದೇವರ ಅಕ್ಷರಶಃ ಮಾತುಗಳು ಮತ್ತು ಯಾವುದೇ ಹಸ್ತಕ್ಷೇಪಗಳಿಗೆ ಒಳಗಾಗದೆ ಸುರಕ್ಷಿತವಾಗಿ ಸಂರಕ್ಷಿಸಲಾದ ಧರ್ಮ ಗ್ರಂಥವೆಂದು ನಂಬುತ್ತಾರೆ. ಇವರು ಮುಹಮ್ಮದ್ ಪೈಗಂಬರರನ್ನು ಇಸ್ಲಾಂ ಧರ್ಮದ ಪ್ರಮುಖ ಮತ್ತು ಅಂತಿಮ ಪ್ರವಾದಿಯೆಂದು ಪರಿಗಣಿಸುತ್ತಾರೆ. ಮುಹಮ್ಮದ್ ಪೈಗಂಬರರ ನುಡಿಮುತ್ತುಗಳನ್ನು ಮತ್ತು ಜಗತ್ತಿಗೆ ಸಾರಿದ ಸಂದೇಶಗಳನ್ನು ಸುನ್ನತ್ ಎಂದು ಕರೆಯಲಾಗುತ್ತಿದ್ದು, ಇವುಗಳನ್ನು ಹದೀಸ್ ಎಂಬ ಹೆಸರಿನಲ್ಲಿ ಜೋಪಾನವಾಗಿ ಸಂಗ್ರಹಿಸಿಡಲಾಗಿದೆ. 'ಖುರಾನ' ಮತ್ತು 'ಹದೀಸ್'ಗಳು ಇಸ್ಲಾಂ ಧರ್ಮದ ಧಾರ್ಮಿಕ ಬೋಧನೆಗಳನ್ನು, ಸಂಸ್ಕೃತಿ ಮತ್ತು ಇತಿಹಾಸವನ್ನು ಸಾರುವ ಪ್ರಮುಖ ಮೂಲ ಆಧಾರಗಳಾಗಿವೆ.

ಇಸ್ಲಾಮಿನ ಐದು ಸ್ತಂಭಗಳಲ್ಲಿ ನಾಲ್ಕನೆಯ ಕಡ್ಡಾಯ ಕರ್ಮಸ್ತಂಭವಾಗಿರುವ ರಂಜಾನ್ ಒಂದು ತಿಂಗಳ ಕಾಲ ಉಪವಾಸ ವ್ರತದೊಂದಿಗೆ ಇಸ್ಲಾಮಿನ ಧಾರ್ಮಿಕ, ಸಾಂಪ್ರದಾಯಿಕ ವಿಧಿ ವಿಧಾನಗಳ ಪಾಲನೆಯೊಂದಿಗೆ ಆಚರಿಸುವ ವ್ರತಾಚರಣೆಯಾಗಿದೆ. ಸೂರ್ಯೋದಯದಿಂದ ಹಿಡಿದು ಸೂರ್ಯಾಸ್ತಮದವರೆಗೆ ಧರ್ಮ ಪಾಲನೆಗೆ ನಿಷ್ಠುರಾಗಿ ಅಲ್ಲಾ ದೇವರ ಕೃಪೆಗೆ ಪಾತ್ರರಾಗಿ ಭಕ್ತಿಯಿಂದ ಅನ್ನ, ಆಹಾರ-ಪಾನೀಯಗಳನ್ನು ಹಾಗೂ ದುಶ್ಚಟಗಳನ್ನು ತ್ಯಜಿಸುವುದನ್ನೇ ಇಸ್ಲಾಮಿನಲ್ಲಿ ಉಪವಾಸ ಅಥವಾ ವ್ರತಾಚರಣೆ ಎನ್ನಲಾಗಿದೆ.

ಲೋಕ ಕಲ್ಯಾಣಕ್ಕಾಗಿ ಮಾನವಕುಲಕ್ಕೆ ಮಾರ್ಗದರ್ಶನವನ್ನು ನೀಡಲು ರಚಿಸಿದ ಇಸ್ಲಾಂ ಧರ್ಮದ ಪವಿತ್ರ ಗ್ರಂಥವಾದ ಖುರಾನ ಅವತೀರ್ಣಗೊಂಡ ತಿಂಗಳು ರಂಜಾನ್. ಇದರ ಸ್ಮರಣಾರ್ಥಕವಾಗಿ ಪ್ರತಿವರ್ಷವೂ ಒಂದು ತಿಂಗಳ ಕಾಲ ರಂಜಾನ್ ನಾಮದೊಂದಿಗೆ ಮುಸ್ಲಿಮರು ವ್ರತಾಚರಣೆಯನ್ನು ಮಾಡುತ್ತಾರೆ.

ಇಸ್ಲಾಮಿಕ್ ಕ್ಯಾಲೆಂಡರ್ ಪ್ರಕಾರ 9ನೇ ತಿಂಗಳಿನಲ್ಲಿ ರಂಜಾನ್ ಹಬ್ಬದ ಸಂಭ್ರಮಾಚರಣೆ ಪ್ರಾರಂಭವಾಗುತ್ತದೆ. ಇದು ಇಸ್ಲಾಮಿಕ್ ಕ್ಯಾಲೆಂಡರ್ ಚಂದ್ರನ ಚಕ್ರಗಳನ್ನು ಆಧರಿಸಿರುವುದರಿಂದ ಪ್ರತಿ ವರ್ಷವೂ ದಿನ ಬದಲಾವಣೆಯೊಂದಿಗೆ ರಂಜಾನ್ ಆಚರಿಸಲಾಗುತ್ತದೆ.

ಮುಸ್ಲಿಂ ಬಾಂಧವರು ಚಂದ್ರನನ್ನು ರಂಜಾನ್ ಪ್ರಾರಂಭವಾಗುವ ಮೊದಲ ದಿನದಂದು ನೋಡಿಕೊಂಡು ರೋಜಾ ವ್ರತವನ್ನು ಕೈಗೊಳ್ಳುತ್ತಾರೆ. ಮೂವತ್ತು ದಿನಗಳ ಸತತವಾಗಿ ರೋಜಾ ವ್ರತವನ್ನು ಪಾಲಿಸಿಕೊಂಡು ರಂಜಾನ್ ಕೊನೆಗೊಳ್ಳುವ ಕೊನೆಯ ದಿನದಂದು ಮತ್ತೊಮ್ಮೆ ಚಂದ್ರನನ್ನು ನೋಡಿಕೊಳ್ಳುವುದರ ಮೂಲಕ ಪ್ರಮುಖವಾಗಿ ಹಿಲಾಲ್ (ಚಾಂದರಾತ್) ರಾತ್ರಿಯನ್ನು ಆಚರಿಸುತ್ತಾರೆ.

ಉಪವಾಸ ಕೇವಲ ಶಾರೀರಿಕ ಕ್ರಿಯೆಯಲ್ಲ. ಇದು ಮುಸ್ಲಿಮರನ್ನು ಅಲ್ಲಾಹು ದೇವರ ಹತ್ತಿರ ತರುವ ಉದ್ದೇಶವನ್ನು ಹೊಂದಿರುವ ಆಧ್ಯಾತ್ಮಿಕ ಕ್ರಿಯೆಯಾಗಿದೆ. ಉಪವಾಸವು ಮುಂಜಾನೆ ಪ್ರಾರಂಭವಾಗಿ ಸಾಯಂಕಾಲ ಸಮಯದಲ್ಲಿ ಕೊನೆಗೊಳ್ಳುತ್ತದೆ. ಈ ಸಮಯದಲ್ಲಿ ತಿನ್ನುವುದು ಮತ್ತು ಕುಡಿಯುವುದನ್ನು ತ್ಯಜಿಸುವುದರ ಜೊತೆಗೆ, ಮುಸ್ಲಿಮರು ಶಾರೀರಿಕ ಸಂಬಂಧಗಳಿಂದ, ದುಶ್ಚಟಗಳಿಂದ, ದುರ್ನಡತೆಗಳಿಂದ ದೂರವಿರುತ್ತಾರೆ.

ರೋಜಾ ಇರುವ ಬಾಂಧವರು ಸಾಮಾನ್ಯವಾಗಿ ಬೇಗನೆ ಎದ್ದು ತಮ್ಮ ಉಪವಾಸವನ್ನು ಪ್ರಾರಂಭಿಸುವ ಮೊದಲು ಸೂರ್ಯೋದಯದ ಪೂರ್ವದಲ್ಲಿ ಸೇವಿಸುವ ಲಘು ಆಹಾರವನ್ನು ಸುಹೂರ್ ಅಥವಾ ಸಹರಿ ಎಂದು ಕರೆಯಲಾಗುತ್ತದೆ.

ಪ್ರತಿದಿನ ಸೂರ್ಯಾಸ್ತದ ನಂತರ ಇಫ್ತಿಯಾರ್ ವೇಳೆಯಲ್ಲಿ ಎಲ್ಲರೂ ಒಂದೇ ಕಡೆ ಸೇರಿ ಮಸೀದಿಗಳಲ್ಲಿ, ಕೆಲವರು ಮನೆಗಳಲ್ಲಿ ಕುಟುಂಬದವರ ಜೊತೆಗೂಡಿ ಮೊದಲು ಖರ್ಜೂರ, ತಂಪು ಪಾನೀಯ, ಹಣ್ಣುಗಳನ್ನು ತಿನ್ನುವ ಮೂಲಕ ಉಪವಾಸವನ್ನು ಮುರಿಯುತ್ತಾರೆ.

ತರಾವಿಹ್ ಎಂಬುದು ಭಕ್ತರು ಮಾಡುವ ತಡರಾತ್ರಿಯ ಪ್ರಾರ್ಥನೆಯಾಗಿದೆ. ಮುಸ್ಲಿಂ ಸಹೋದರರು ರಂಜಾನ್ ತಿಂಗಳಲ್ಲಿ ಪ್ರತಿ ರಾತ್ರಿ ದೇವರಲ್ಲಿ ಪ್ರಾರ್ಥನೆಯನ್ನು ಸಲ್ಲಿಸುತ್ತಾರೆ. ಝಕಾತ್ ಸಮಾಜಕ್ಕೆ ಮತ್ತು ಆರ್ಥಿಕವಾಗಿ ಹಿಂದುಳಿದ ಬಡವವರಿಗೆ ನಿರ್ಗತಿಕರಿಗೆ ಅನ್ನ, ಆಹಾರ, ವಸ್ತುಗಳನ್ನೂ, ಆಭರ್ಣಗಳನ್ನು, ಸಂಪತ್ತನ್ನು ದಾನವಾಗಿ ನೀಡುವ ಒಂದು ಮಾರ್ಗವಾಗಿದೆ.

ರಂಜಾನ್ ಆಧ್ಯಾತ್ಮಿಕ ಪ್ರತಿಫಲನ, ಸ್ವಯಂ-ಸುಧಾರಣೆ ಮತ್ತು ಮುಸ್ಲಿಮರಿಗೆ ಹೆಚ್ಚಿದ ಆರಾಧನೆಯ ಸಮಯ ಎಂದು ಉದ್ದೇಶಿಸಲಾಗಿದೆ. ಮೂವತ್ತು ದಿನಗಳ ಉಪವಾಸ ಮುಕ್ತಾಯದ ನಂತರ ಶವಾಲ್ನ ತಿಂಗಳಿನ ಮೊದಲನೆಯ ದಿವಸದಂದು ಈದ್ ಉಲ್ ಫಿತರ್ ಹಬ್ಬವನ್ನೂ ಆಚರಿಸಲಾಗುತ್ತದೆ.

ಈ ಆಚರಣೆಯು ರಂಜಾನ್ ತಿಂಗಳ ಹಗಲಿನಲ್ಲಿ ತೊಟ್ಟು ನೀರೂ ಕುಡಿಯದೆ, ಅಲ್ಪೋಪಹಾರ ಸೇವಿಸದೇ ಕಠಿಣ ವೃತದ ಮೂಲಕ ಹಸಿವಿನ ಕಠಿಣತೆಯ ಅರಿವನ್ನು ಮೂಡಿಸುತ್ತದೆ, ಇಲ್ಲಿ ಬಡವ- ಶ್ರೀಮಂತರೆನ್ನುವ ಬೇಧವಿಲ್ಲದೆ ಎಲ್ಲರೂ ಸಮಾನರಾಗಿ ವೃತಾಚರಣೆಯಲ್ಲಿ ತೊಡಗುತ್ತಾ- ರೆ. ಇದು ಸಮಾನತೆ ಮತ್ತು ಏಕತೆಯನ್ನು ಸಾರುತ್ತದೆ. ಈ ಹಬ್ಬವು ಸಂದರ್ಭೋಚಿತವಾಗಿ ದಾನ್ಯ, ಸಂಪತ್ತನ್ನು ಬಡ ನಿರ್ಗತಿಕರಿಗೆ ದಾನ ಮಾಡುವುದನ್ನು ತಿಳಿಸುತ್ತದೆ.



– **ಪಾಂಡು ಆಲಪ್ಪ ಚವ್ಹಾಣ.**
ಉಪನ್ಯಾಸಕರು, ಬೆಳಧಡಿ-ಗದಗ.

# ಬೇಸ್-ಸನ್ಮಾರ್ಗ ಮಹಾವಿದ್ಯಾಲಯ ಒಡಂಬಡಿಕೆ



■ **ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಸನ್ಮಾರ್ಗ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ತಾವು ತಯಾರಿಸಿದ ವಿಷಯವಾರು ಪಠ್ಯದ ಜೊತೆಗೆ ಬೇಸ್ (ಃಂಖಇ) ಶಿಕ್ಷಣ ಸೇವೆ ಒದಗಿಸುವ ಸಂಸ್ಥೆಯೊಂದಿಗೆ ಒಡಂಬಡಿಕೆ ಮಾಡಿಕೊಂಡಿದೆ. ಗದುಗಿನ ಸನ್ಮಾರ್ಗ ಪ.ಪೂ ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಅಂಕಗಳಿಂದ ಮಾತ್ರ ಪ್ರಥಮರಾಗದೆ ಜ್ಞಾನದಿಂದಲೂ ಪ್ರಥಮರಾಗಬೇಕು ಎಂಬ ಆಶಯದೊಂದಿಗೆ ವಿಶೇಷ ಪಠ್ಯವನ್ನು ತಯಾರಿಸಿದ್ದು, ಬೇಸ್ ಸಂಸ್ಥೆ 2 ವರ್ಷಗಳ ಅಂತ್ಯದಲ್ಲಿ ಬರುವ ಸಿ.ಇ.ಟಿ, ನೀಟ್ ಮುಂತಾದ ಎಲ್ಲ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧಪಡಿಸಲೆಂದೇ ವಿಷಯವಾರು ಪಠ್ಯ ಪುಸ್ತಕಗಳನ್ನು ತಯಾರಿಸಿದೆ.

ವಿದ್ಯಾರ್ಥಿಗಳು ತಮ್ಮ ಕಾಲೇಜಿಗೆ ಮಾತ್ರ ಸೀಮಿತವಾಗದೆ ಜಾಗತಿಕವಾಗಿ ಎಲ್ಲ ತಾಂತ್ರಿಕ ಮಹಾವಿದ್ಯಾಲಯಗಳಲ್ಲಿ ಅವಕಾಶ ದೊರಕಬೇಕಾದರೆ ನಿರಂತರ ಅಭ್ಯಾಸ ಅನಿವಾರ್ಯ ಮತ್ತು ಅವಶ್ಯಕ. ಈ ಅವಶ್ಯಕತೆಯನ್ನು ವಿದ್ಯಾರ್ಥಿಗಳಿಗೆ ಮನದಟ್ಟು ಮಾಡಿಸುವ ಉದ್ದೇಶದಿಂದಲೇ ಈ ಹೊಸ ಆಲೋಚನೆಯನ್ನು ಕಾರ್ಯಗತಗೊಳಿಸುತ್ತಿರುವುದು. ಈ ಉದ್ದೇಶ ಕಾರ್ಯೋನ್ಮುಖವಾಗಬೇಕಾದರೆ ಪಾಲಕರ ಹಾಗೂ ವಿದ್ಯಾರ್ಥಿಗಳ ಸಹಕಾರ ಅಷ್ಟೇ ಮುಖ್ಯ. ಹಳ್ಳಿ ಹಳ್ಳಿಗೂ ಈ ಯೋಜನೆ ತಲುಪಬೇಕು, ಹಾಗೂ ಸದುಪಯೋಗವಾಗಬೇಕು. ಜೊತೆಗೆ ನಮ್ಮ ವಿದ್ಯಾರ್ಥಿಗಳು ಜಾಗತಿಕ ಮಟ್ಟದಲ್ಲಿ ಹೆಸರು ಮಾಡಬೇಕು ಎನ್ನುವುದೇ ಸ್ಟೂಡೆಂಟ್ಸ್ ಎಜ್ಯುಕೇಶನ್ ಸೊಸೈಟಿಯ ಉದ್ದೇಶ ಮತ್ತು ಆಶಯ ಎಂದು ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ ಕುಲಕರ್ಣಿ ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಪದಾಧಿಕಾರಿಗಳಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಕಾಲೇಜಿನ ಪ್ರಾಂಶುಪಾಲ ಪ್ರೊ. ಪ್ರೇಮಾನಂದ ರೋಣದ ಮತ್ತು ಆಡಳಿತಾಧಿಕಾರಿಗಳಾದ ಎಮ್.ಸಿ. ಹಿರೇಮಠ ಉಪಸ್ಥಿತರಿದ್ದರು.

# ಬಿಸಿಲಿನ ಶಾಖದಿಂದ ಜಿಲ್ಲೆಯಲ್ಲಿ 7 ಸೌಮ್ಯಪ್ರಮಾಣದಿಂದ ಬಳಲಿದ ಪ್ರಕರಣ ಪತ್ತೆ

■ **ವಿಜಯಸಾಕ್ಷಿ ಸುದ್ದಿ, ಕಲಬುರಗಿ,**

ಜಿಲ್ಲೆಯಲ್ಲಿ ಕಳೆದ ಒಂದು ವಾರದಲ್ಲಿ ಬಿಸಿಲಿನ ಶಾಖದಿಂದ 7 ಸೌಮ್ಯ (mild) ಪ್ರಮಾಣದಿಂದ ಬಳಲಿದ ಪ್ರಕರಣವು ಪತ್ತೆಯಾಗಿವೆ ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಅಧಿಕಾರಿಗಳಾದ ಡಾ. ರತಿಕಾಂತ ಸ್ವಾಮಿ ಅವರು ತಿಳಿಸಿದ್ದಾರೆ. ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಬಿಸಿಲಿನ ತಾಪಮಾನವು ಹೆಚ್ಚಾಗಿದ್ದರೂ ಕೂಡಾ ಯಾವುದೆ ತೆರೆನಾದ ಅಹಿತಕರ ಘಟನೆಗಳು ಘಟಿಸಿಲ್ಲ.

ಬಿಸಿಲ ಶಾಖದ ತಾಮಾನದಿಂದ ಜಿಲ್ಲೆಯಲ್ಲಿ ಈವರೆಗೆ 7 ಸೌಮ್ಯ (mild) ಪ್ರಕರಣಗಳು ಪ್ರಾಥಮಿಕ ಹಾಗೂ ಸಮುದಾಯ ಆರೋಗ್ಯ ಕೇಂದ್ರ ಮಟ್ಟದಲ್ಲಿ ದಾಖಲಾಗಿ ಅಲ್ಲಿಯೇ ಚಿಕಿತ್ಸೆಯನ್ನು ತೆಗೆದುಕೊಂಡು ಗುಣಮುಖರಾಗಿದ್ದಾರೆ.

ಈಗಾಗಲೇ ರಾಜ್ಯದಲ್ಲಿ ಬೇಸಿಗೆಯ ತಾಪಮಾನದ ಏರಿಕೆಯು ಹೆಚ್ಚಾಗುತ್ತಿದ್ದು, ಕಲಬುರಗಿಯಲ್ಲಿಯೂ ಕೂಡಾ ಕಳೆದ ಒಂದು ವಾರದಿಂದ ಹೆಚ್ಚಿನ ತಾಪಮಾನವು ದಾಖಲಾಗಿದ್ದು, ಜಿಲ್ಲೆಯ ಸಾರ್ವಜನಿಕರು ತೆಗೆದುಕೊಳ್ಳಬೇಕಾದ ಮುಂಜಾಗೃತ ಕ್ರಮಗಳ ಕುರಿತು ಕಲಬುರಗಿ ಜಿಲ್ಲಾಧಿಕಾರಿಗಳು ಮಾಧ್ಯಮದ ಮೂಲಕ ತಿಳಿಸಿದ್ದು, ಜಿಲ್ಲೆಯ ಎಲ್ಲಾ ಅಧಿಕಾರಿಗಳು ಈ ವಿಷಯದಲ್ಲಿ ಕಾರ್ಯ ಪ್ರವೃತ್ತರಾಗಬೇಕೆಂದು ಸೂಚಿಸಿದರು. ಹವಾಮಾನ ಇಲಾಖೆಯ ಪ್ರಕಾರ ಇನ್ನೂ ಬಿಸಿಲಿನ ತಾಪಮಾನವು ಇದೆ ತೆರನಾಗಿ ಮುಂದುವರೆಯಲಿದ್ದು, ಸಾರ್ವಜನಿಕರು, ಮಕ್ಕಳು, ಗರ್ಭಿಣಿಯರು, ಇನ್ನೂ ಹೆಚ್ಚಿನ ರೀತಿಯಲ್ಲಿ ಆರೋಗ್ಯದ ಕುರಿತು ಕಾಳಜಿ ವಹಿಸಬೇಕು.ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದ್ದಾರೆ.

# ಪ್ರಜ್ಞಾಪೂರ್ವಕ ಮತದಾನ ಅತ್ಯಗತ್ಯ



■ **ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ದೇಶದ ಸದ್ಯದ ರಾಜಕೀಯದ ಸ್ಥಿತ್ಯಂತರ ಸನ್ನಿವೇಶದಲ್ಲಿ ಅತ್ಯಂತ ಶ್ರೇಷ್ಠವಾದ ಮತದಾನವನ್ನು ಯಾವುದೇ ಆಸೆ-ಆವಿಷಗಳಿಗೊಳಗಾಗದೇ ಸಂವಿಧಾನವು ಕೊಡಮಾಡಿದ ಮತದಾನದ ಹಕ್ಕನ್ನು ಪ್ರಜ್ಞಾಪೂರ್ವ ಕವಾಗಿ ಚಲಾಯಿಸಬೇಕು ಎಂದು ಪ್ರಾಚಾರ್ಯ ಪ್ರೊ. ಪ್ರೇಮಾನಂದ ರೋಣದ ಕರೆ ನೀಡಿದರು.

ನಗರದ ಸನ್ಮಾರ್ಗ ಪದವಿ ಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ವಿದ್ಯಾಲಯದಲ್ಲಿ ಜರುಗಿದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ ಸಂವಿಧಾನದ ಹಕ್ಕು ಮತ್ತು ಕರ್ತವ್ಯಗಳ ಕುರಿತು ವಿದ್ಯಾರ್ಥಿಗಳಿಗೆ ತಿಳಿ ಹೇಳಿ, ಭಾವೀ ಪ್ರಜೆಗಳಾದ ನೀವು ಭಾವೀ ಭಾರತವನ್ನು ಭವ್ಯಭಾರತವನ್ನಾಗಿ ನಿರ್ಮಿಸುವ ಸಂಕಲ್ಪ ತೊಡಬೇಕೆಂದರು.

ವಿದ್ಯಾರ್ಥಿಗಳಿಗೆ ಪ್ರೊ. ಸೈಯ್ಯದ ಮತಿನ್ ಮುಲ್ಲಾ ಪ್ರತಿಜ್ಞಾವಿಧಿ ಬೋಧಿಸಿದರು. ಸಮಾರಂಭದಲ್ಲಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಉಡುಪಿ ದೇಶಪಾಂಡೆ, ಪ್ರೊ. ರಾಹುಲ್ ಒಡೆಯರ್, ಆಡಳಿತಾಧಿಕಾರಿ ಎಮ್.ಸಿ. ಹಿರೇಮಠ, ವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

### ಮತದಾನ ಜಾಗೃತಿಗಾಗಿ ಬೃಹತ್ ಕಾಲ್ನಡಿಗೆ ಜಾಥಾ

# ಕಡ್ಡಾಯ ಮತದಾನ ನಮ್ಮೆಲ್ಲರ ಆದ್ಯ ಕರ್ತವ್ಯ




■ **ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭಾ ಸಾರ್ವತ್ರಿಕ ಚುನಾವಣೆಯ ಹಿನ್ನೆಲೆಯಲ್ಲಿ ವ್ಯವಸ್ಥಿತ ಮತದಾರರ ಶಿಕ್ಷಣ ಮತ್ತು ಸಹಭಾಗಿತ್ವ ಸಮಿತಿ (ಸ್ವೀಪ್) ವತಿಯಿಂದ ಮತದಾನದ ಮಹತ್ವ ಕುರಿತು ಜಾಗೃತಿ ಜಾಥಾ ನಡೆಯಿತು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಶಿಕ್ಷಕರು, ಸಿಬ್ಬಂದಿಗಳು ಜಾಥಾದಲ್ಲಿ ಪಾಲ್ಗೊಂಡಿದ್ದರು. ನನ್ನ ಮತ ನನ್ನ ಹಕ್ಕು, ಮತದಾನ ಮಾಡುವವರೇ ರಾಜ, ಅಮಿಷಕ್ಕೆ ಮರುಳಾಗದಿರಿ- ಯೋಚಿಸಿ ಮತ ಹಕ್ಕು ಚಲಾಯಿಸಿ, ನಿಮ್ಮ ಮತ-ನಿಮ್ಮ ಭವಿಷ್ಯ ಹೀಗೆ ಹಲವು ಘೋಷವಾಕ್ಯಗಳು ಜಾಥಾದಲ್ಲಿ ಮೊಳಗಿದವು.

ನಗರದ ಮುನ್ಸಿಪಲ್ ಪ್ರೌಢಶಾಲಾ ಆವರಣದಲ್ಲಿ ಜಾಥಾಗೆ ಜಿಲ್ಲಾ ಪಂಚಾಯತ್ ಸಿಇಓ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಎಸ್. ಭರತ್ ಚಾಲನೆ ನೀಡಿದರು. ನಗರದ ಗಾಂಧಿ ವೃತ್ತದಲ್ಲಿ ಮಾನವ ಸರಪಳಿ ಏರ್ಪಡಿಸಿ ಮತದಾನದ ಮಹತ್ವದ ಕುರಿತು ಸಂದೇಶ ಸಾರಿದರು. ರೋಟರಿ ವೃತ್ತ, ಭೂಮರಡ್ಡಿ ವೃತ್ತ, ಜಿಲ್ಲಾಧಿಕಾರಿಯವರ ಹಳೇ ಕಚೇರಿ ವೃತ್ತದಲ್ಲಿ ಮಾನವ ಸರಪಳಿ ಏರ್ಪಡಿಸಿ ಮತದಾನದ ಮಹತ್ವ ಕುರಿತು ಅರಿವು ಮೂಡಿಸಲಾಯಿತು.

ಜಿ.ಪಂ ಸಿಇಓ ಎಸ್. ಭರತ್ ಮಾತನಾಡಿ, 18 ವರ್ಷ ಪೂರ್ಣಗೊಂಡ ಎಲ್ಲಾ ಅರ್ಹರು ಕಡ್ಡಾಯವಾಗಿ ಮತದಾನ ಮಾಡುವಂತಾಗಬೇಕು. ಮತದಾನದಿಂದ ಅರ್ಹರು ಯಾವುದೇ ಕಾರಣಕ್ಕೂ ವಂಚಿತರಾಗಬಾರದು. ಪ್ರಜಾಪ್ರಭುತ್ವ ಬಲಪಡಿಸುವಲ್ಲಿ ಮತದಾನ ಅತೀ ಮುಖ್ಯವಾಗಿದೆ. ಆ ನಿಟ್ಟಿನಲ್ಲಿ ಅರ್ಹರೆಲ್ಲರೂ ಮತದಾನ ಮಾಡುವಂತಾಗಬೇಕೆಂದು ಕೋರಿದರು.

ಭಾಗವಹಿಸಿರುವ ಪ್ರತಿಯೊಬ್ಬರೂ ಕೈಯಲ್ಲಿ ಕಡ್ಡಾಯ ಮತದಾನ ಘೋಷವಾಕ್ಯದ ಪ್ಲೇಕಾರ್ಡ್‌ಗಳನ್ನು ಹಿಡಿದು ಸಾರ್ವಜನಿಕರಿಗೆ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಿದರು. ಉಪ ವಿಭಾಗಾಧಿಕಾರಿ ವೆಂಕಟೇಶ್ ನಾಯ್ಕ್, ಜಿ.ಪಂ ಯೋಜನಾ ನಿರ್ದೇಶಕ ಜಗದೇವಪ್ಪ, ತಾ.ಪಂ ಇಓ ಮಾಣಿಕರಾವ್ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ಮುಂತಾದವರಿದ್ದರು.

# ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ದೇಶವು ಲೋಕಸಭಾ ಚುನಾವಣೆಯ ಹೊಸ್ತಿಲಲ್ಲಿದ್ದು, ಮತ್ತೊಮ್ಮೆ ಸರ್ಕಾರ ಬದಲಾಯಿಸುವ ಅವಕಾಶ ನಮ್ಮ ಕೈಯಲ್ಲಿದೆ. ಇಂದು ಭ್ರಷ್ಟಾಚಾರಿಗಳು ಬಿಜೆಪಿ ಸೇರಿದ ಕೂಡಲೇ ಸ್ವಚ್ಛಗೊಳ್ಳುತ್ತಾರೆ. ಅವರ ಮೇಲಿನ ಆರೋಪದ ತನಿಖೆಗಳು ಸ್ಥಗಿತಗೊಳ್ಳುತ್ತಿದೆ. ಸರಕಾರದ ವಿರುದ್ಧ ದನಿಯೆತ್ತಿದವರನ್ನು ಜೈಲಿಗೆ ಹಾಕಲಾಗುತ್ತಿದೆ. ಇಂತಹವರು ಮರಳಿ ಅಧಿಕಾರಕ್ಕೇರಿದರೆ ದೇಶದ ಭವಿಷ್ಯ ಹೇಗಿರಬಹುದು ಎಂದು ವೆಲ್ಫೇರ್ ಪಾರ್ಟಿಯ ರಾಜ್ಯಾಧ್ಯಕ್ಷ ತಾಹೇರ್ ಹುಸೇನ್ ಪ್ರಶ್ನಿಸಿದ್ದಾರೆ.



ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಈ ಬಾರಿಯ ಚುನಾವಣೆ ದೇಶದ ಮಟ್ಟಿಗೆ ಬಹಳ ಮಹತ್ತರವಾದದ್ದು. ದೇಶದ ಮತದಾರ ಬಂಧುಗಳು ಈ ಚುನಾವಣೆಯನ್ನು ಬಹಳ ಗಂಭೀರವಾಗಿ ಪರಿಗಣಿಸಬೇಕು. ಪರಸ್ಪರ ಜಾತಿಯ ಧರ್ಮಗಳ ನಡುವಿನ ಕಲಹಗಳು ಮತ ಬ್ಯಾಂಕ್ ಆಗಿ ಬದಲಾಗುತ್ತದೆ. ರಾಜ್ಯ ಸರಕಾರ ಬಡವರಿಗೆ ವಿತರಿಸಲು ಅಕ್ಕಿಯನ್ನು ಕೇಳಿದಾಗ ಅದನ್ನು ನೀಡಲು ಹಿಂಜರಿದರು. ಒಟ್ಟಿನಲ್ಲಿ, ದೇಶದ ಜನತೆಯ ಬಗ್ಗೆ ಕಳಕಳಿಯಿರುವ ಜಾತ್ಯಾತೀತ ಅಭ್ಯರ್ಥಿಗಳನ್ನು ಚುನಾಯಿಸಿ ದೇಶವನ್ನು ಪಾರು ಮಾಡಬೇಕಾಗಿದೆ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

# ಚಿಕಿತ್ಸೆಗೆ ನೆರವಾದ ಬಸವರಾಜ ಬೊಮ್ಮಾಯಿ; ಧನ್ಯವಾದ ಅರ್ಪಿಸಿದ ದಂಪತಿ




■ **ವಿಜಯಸಾಕ್ಷಿ ಸುದ್ದಿ, ಹಾವೇರಿ**

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ಮುಖ್ಯಮಂತ್ರಿಯಾಗಿದ್ದ ಸಂದರ್ಭದಲ್ಲಿ ಗದಗ ಜಿಲ್ಲೆಯ ರೋಣ ತಾಲೂಕಿನ ಇಟಗಿ ಗ್ರಾಮದ ರಾಜಶೇಖರಯ್ಯ ಹಿರೇಮಠ ದಂಪತಿಗಳ ಪುತ್ರನ ಸಂಪೂರ್ಣ ಶ್ರವಣ ದೋಷ ನಿವಾರಣೆ ಚಿಕಿತ್ಸೆಗೆ 8.50 ಲಕ್ಷ ರೂ. ನೆರವು ನೀಡಿದನ್ನು ಸ್ಮರಿಸಿ, ಸವಣೂರಿನಲ್ಲಿ ಬೊಮ್ಮಾಯಿಯವರನ್ನು ಭೇಟಿ ಮಾಡಿ ಕೃತಜ್ಞತೆ ಸಲ್ಲಿಸಿದರು.

ಬಸವರಾಜ ಬೊಮ್ಮಾಯಿಯವರು ಅಧಿಕಾರದಲ್ಲಿದ್ದಾಗ ಹಿರೇಮಠ ದಂಪತಿ ತಮ್ಮ ಮಗ ವಿನಯ ಹಿರೇಮಠನಿಗೆ ಶ್ರವಣ ದೋಷವಿದ್ದು, ಕಿವಿ ಸಂಪೂರ್ಣವಾಗಿ ಕೇಳುವುದಿಲ್ಲ. ಹೀಗಾಗಿ ಚಿಕಿತ್ಸೆಗೆ ಸಹಾಯ ಮಾಡಿ ಎಂದು ಮನವಿ ಮಾಡಿದ್ದರು. ಆ ಸಂದರ್ಭದಲ್ಲಿ ಬಸವರಾಜ ಬೊಮ್ಮಾಯಿಯವರು ದಂಪತಿಗಳ ಸ್ಥಿತಿಯನ್ನು ಅವಲೋಕಿಸಿ, ಚಿಕಿತ್ಸೆಗಾಗಿ ತಕ್ಷಣ 8.50 ಲಕ್ಷ ರೂ ಹಣವನ್ನು ನೀಡಿದ್ದರು.

ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿಯಾಗಿರುವ ಬಸವರಾಜ ಬೊಮ್ಮಾಯಿಯವರು ಚುನಾವಣಾ ಪ್ರಚಾರದಲ್ಲಿದ್ದ ಸಂದರ್ಭದಲ್ಲಿ ರಾಜಶೇಖರಯ್ಯ ಹಿರೇಮಠ ಅವರು ದಂಪತಿ ಸಮೇತ ಆಗಮಿಸಿ, ಅವರನ್ನು ಭೇಟಿ ಮಾಡಿ ತಮ್ಮ ಮಗ ಸಂಪೂರ್ಣ ಗುಣಮುಖನಾಗಿದ್ದಾನೆ ಎಂದು ಸಂತಸ ವ್ಯಕ್ತಪಡಿಸಿ, ಕೃತಜ್ಞತೆಯನ್ನು ಅರ್ಪಿಸಿದರು.

# ಕೇಂದ್ರದಿಂದ ವಿದೇಶಿ ಹೂಡಿಕೆಗೆ ವೇದಿಕೆ



■ವಿಜಯಸಾಕ್ಷಿ ಸುದ್ದಿ, ಗದಗ

2014ರಲ್ಲಿ ಭಾರತಿಯ ಜನತಾ ಪಾರ್ಟಿಯ ನರೇಂದ್ರ ಮೋದಿ ಸರಕಾರ ಅಧಿಕಾರಕ್ಕೆ ಬಂದ ನಂತರ ದೇಶದಲ್ಲಿ ವಿದೇಶಿ ಹೂಡಿಕೆಗೆ ಪೂರಕ ವಾತಾವರಣ ನಿರ್ಮಿಸಿ, ವಿದೇಶಿ ಹೂಡಿಕೆಗೆ ವೇದಿಕೆ ನಿರ್ಮಿಸಿದರು. ಇದರಿಂದ ಲಕ್ಷಾಂತರ ಯುವಕರಿಗೆ ಉದ್ಯೋಗ ಸಿಗುತ್ತಿದೆ. ನಮ್ಮ ದೇಶದ ಮೇಲೆ ದಾಳಿ ಮಾಡಿದ ಭಯೋತ್ಪಾದಕರಿಗೆ ಅವರದೇ ಬಾಷೆಯಲ್ಲಿ ಉತ್ತರ ನೀಡಿ ಭಾರತ ದೇಶದ ಶಕ್ತಿಯನ್ನು ಇಡೀ ಜಗತ್ತಿಗೆ ತೋರಿಸಿದ್ದಾರೆ. ಅವರಿಗೆ ಇನ್ನಷ್ಟು ಶಕ್ತಿ ತುಂಬಲು ಈ ಬಾರಿ 400ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಿಸಬೇಕು ಎಂದು ಕಾರ್ಯಕರ್ತರಿಗೆ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ ಕರೆ ನೀಡಿದರು.

ಪಕ್ಷದ ಕಚೇರಿಯಲ್ಲಿ ಬಿಜೆಪಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ದೇಶ ಸಧೃಡ ಹಾಗೂ ಭದ್ರವಾಗಿದೆ ಎಂದು ಸುಳ್ಳು ಹೇಳಿ ದೇಶದ ಜನತೆಗೆ ಮೋಸ ಮಾಡಿದ್ದಲ್ಲದೆ, ಭಾರತದ ಸಾಮರ್ಥ್ಯದ ಬಗ್ಗೆ ತಪ್ಪು ಮಾಹಿತಿ ನೀಡುತ್ತಿದ್ದರು ಎಂದು ದೂರಿದರು.

ದೇಶದಲ್ಲಿ ಕಾಂಗ್ರೆಸ್ ಸರಕಾರದ ಸಮಯದಲ್ಲಿ ಭಾರತದಲ್ಲಿ ಭಯೋತ್ಪಾದಕರ ಹಾವಳಿ ಹೆಚ್ಚಾಗಿತ್ತು. ಇದರಿಂದ ಭಾರತ ಒಂದು ದುರ್ಬಲ ದೇಶ ಎಂದು ಬಿಂಬಿತವಾಗಿತ್ತು ಎಂದು ಕಾಂಗ್ರೆಸ್ ಪಕ್ಷದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈಶ್ವರ-ಬಸವಣ್ಣ ದೇವರ ಜಾತ್ರಾ ಮಹೋತ್ಸವದ ಅಂಗವಾಗಿ 21 ಜೋಡಿ ಸಾಮೂಹಿಕ ವಿವಾಹ

# ದಂಪತಿಗಳು ಅರಿತು-ಬೆರೆತು ನಡೆಯಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಸಂಸಾರ ಹೇಗಿರಬೇಕೆಂದರೆ, ಹೆಣ್ಣು ಗಂಡನನ್ನು, ಗಂಡು ಹೆಣ್ಣನ್ನು ಅರಿತು-ಬೆರೆತು ನಡೆದರೆ ಅಧ್ಯಾತ್ಮದ ಕಾವೇರಿ ಆಗುತ್ತಾಳೆ. ಕುಟುಂಬದಲ್ಲಿ ಸುಖ-ಶಾಂತಿ ನೆಲೆಸಲು ಹೆಣ್ಣು ಮುಖ್ಯವಾಗಿರುತ್ತಾಳೆ. ಕಳಸಾಪೂರ ಗ್ರಾಮದ ಜನತೆ ಧಾರ್ಮಿಕ ಹಾಗೂ ಸಮಾಜಮುಖಿಯಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಮಣಕವಾಡ ದೇವಮಂದಿರ ಮಠದ ಅಭಿನವ ಪೂಜ್ಯಶ್ರೀ ಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು.

ಅವರು ತಾಲೂಕಿನ ಕಳಸಾಪೂರ ಗ್ರಾಮದ ಈಶ್ವರ ಬಸವಣ್ಣ ದೇವರ 14ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ 21 ಜೋಡಿ ಸಾಮೂಹಿಕ ವಿವಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ, ಈ ನಾಡಿನೊಳಗೆ ಶರೀಫ ಶಿವಯೋಗಿಗಳು, ಸಿದ್ಧಾರೂಢರು, ನವಲಗುಂದ ನಾಗಲಿಂಗ ಶಿವಯೋಗಿಗಳು, ಎಮ್ಮಿಗನೂರ ಜಡೆಸಿದ್ದರು, ಚಳಗುರ್ಕಿ ಯರಿ ತಾತನವರು ಸಂಸಾರದ ಮೇಲೆ ಸವಾರಿ ಮಾಡಿದ್ದಾರೆ. ಅಂತೇಯ ಲೋಕ ಪೂಜ್ಯರಾಗಿದ್ದಾರೆ. ನೀವು ಸಂಸಾರಕ್ಕೆ ಅಂಟಿಕೊಳ್ಳದೆ ಸಂಸಾರದಲ್ಲಿದ್ದುಕೊಂಡು ಸದ್ಗತಿ ಪಡೆಯಬೇಕು. ಸಮಾಜಕ್ಕೆ ಒಳ್ಳೆಯ ಮಕ್ಕಳನ್ನು ಹೆತ್ತು ಕೊಡಬೇಕು ಎಂದರು.



ಸಾನ್ನಿಧ್ಯ ವಹಿಸಿದ್ದ ಶಿವಗಂಗಾ ಕ್ಷೇತ್ರದ ಪೂಜ್ಯಶ್ರೀ ಮಲಯ ಶಾಂತಮುನಿ ಶಿವಾಚಾರ್ಯರು ಮಾತನಾಡಿ, ಮದುವೆ ಸ್ವರ್ಗಲೋಕದಲ್ಲಿ ನಿಶ್ಚಯವಾಗಿರುತ್ತದೆ. ಅವರನ್ನು ಭೂಲೋಕದಲ್ಲಿ ಹುಡುಕಿ ಮದುವೆ ಮಾಡುವದು ನಮ್ಮ ಕರ್ತವ್ಯವಾಗಿದೆ. ಅದ್ದರಿಂದ ಮದುವೆಗೆ ಬ್ರಹ್ಮಗಂಟು ಎನ್ನುತ್ತಾರೆ. ಗಂಡ-ಹೆಂಡತಿ ಅರಿತು ಜೀವನ ನಡೆಸಬೇಕು. ಕಳಸಾಪೂರ ಗ್ರಾಮ ಗದುಗಿಗೆ ಕಳಸವಿದ್ದಂತೆ. ಇಂತಹ ಪುರಾತನ ಕಾಲದ ಈಶ್ವರ-ಬಸವಣ್ಣ ದೇವರ ಜಾತ್ರಾ ಮಹೋತ್ಸವವನ್ನು 14 ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವುದು ಸಂತಸದ ವಿಷಯವಾಗಿದೆ. ಈ ಜಾತ್ರಾ ಮಹೋತ್ಸವದ ರೂವಾರಿ ಲಿಂ. ಶ್ರೀಪಾದಯ್ಯ ಇಟಗಿಮಠ ಅವರ ಚಿಂತನಾಶಕ್ತಿಯಿಂದ ನಡೆದುಕೊಂಡು ಬರುತ್ತಿದೆ ಎಂದು ಹೇಳಿದರು.

ಸಮ್ಮುಖ ವಹಿಸಿದ್ದ ಅಡ್ನೂರಿನ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮೀಜಿ, ಓಂಕಾರಗಿರಿ ಓಂಕಾರೇಶ್ವರ ಶ್ರೀಮಠದ ಪೂಜ್ಯಶ್ರೀ ಫಕೀರೇಶ್ವರ ಶಿವಾಚಾರ್ಯರು, ನಾಗರಾಳ ಬಸವಧರ್ಮ ಮಠದ ಪೂಜ್ಯಶ್ರೀ ಶಾಂತವೀರ ಮಹಾಸ್ವಾಮೀಜಿ, ರವುಡಕುಂದ ಸಿದ್ಧಾಶ್ರಮದ ಡಾ. ಸಿದ್ರಾಮೇಶ್ವರ ಶರಣರು, ಗಜೇಂದ್ರಗಡದ ವೇ.ಮೂ. ಚಂದ್ರಶೇಖರ ಶರಣರು, ಕೊಟ್ನಿಕಲ್ ಸಂಗಮೇಶ್ವರಮಠದ ಸಂಗಯ್ಯ ತಾತನವರು ಮಾತನಾಡಿದರು.

ವೇದಿಕೆ ಮೇಲೆ ಜಾತ್ರಾ ಮಹೋತ್ಸವದ ಅಧ್ಯಕ್ಷ ನಿಂಗಯ್ಯ ಇಟಗಿಮಠ, ವಿಜಯಪುರದ ನಿವೃತ್ತ ಡಿವೈಎಸ್‌ಪಿ ಬಿ.ಆರ್. ಚೌಕಿಮಠ, ಕೆಎಂಎಫ್ ನಿರ್ದೇಶಕ ಎಚ್.ಜಿ. ಹಿರೇಗೌಡ್ರ, ಬೆಳದಡಿಯ ಶಂಭುಲಿಂಗಯ್ಯಸ್ವಾಮಿ ಕಲ್ಮಠ, ಕಳಸಾಪೂರ ಗ್ರಾ.ಪಂ ಅಧ್ಯಕ್ಷೆ ಅನಸೂಯಾ ಪಾಟೀಲ, ಪಿ.ಸಿ. ಹಿರೇಮಠ, ಬಿ.ಆರ್. ದೇವರಡ್ಡಿ, ಉದಯಕುಮಾರ ದೇಸಾಯಿ, ಸಿ.ಬಿ. ಪಲ್ಲೇದ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಕಳಸಾಪೂರ ಗ್ರಾ.ಪಂ ಮಾಜಿ ಮತ್ತು ಹಾಲಿ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು ಉಪಸ್ಥಿತರಿದ್ದರು.

ಬಸಯ್ಯಸ್ವಾಮಿ ಇಟಗಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ರಂಜಿತಾ ಬಡಿಗೇರ ಪ್ರಾರ್ಥಿಸಿದರು. ಶರಣಶ್ರೀ ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ ಅವರು ಕಾರ್ಯಕ್ರಮ ನಿರೂಪಿಸಿದರು. ನಂತರ ಮಹಾರಥೋತ್ಸವ, ರಾತ್ರಿ 8 ಗಂಟೆಗೆ ರಸಮಂಜರಿ ಕಾರ್ಯಕ್ರಮ ಜರುಗಿತು.

> ಮದುವೆ ಎಂದರೆ ಹೆಣ್ಣು ಮತ್ತು ಗಂಡಿಗೆ ಲಾಟರಿ ಇದ್ದ ಹಾಗೆ. ಕೆಲವು ಜನರು ಸಂಸಾರದ ಮೇಲೆ ಸವಾರಿ ಮಾಡುತ್ತಾರೆ, ಮತ್ತೆ ಕೆಲವರ ಮೇಲೆ ಸಂಸಾರವೇ ಸವಾರಿ ಮಾಡುತ್ತದೆ. ಗ್ರಾಮದಲ್ಲಿ ಸಾಮೂಹಿಕ ವಿವಾಹ ಹಮ್ಮಿಕೊಂಡು ಬಡವರ ಭಾರವನ್ನು ಇಳಿಸುವ ಕಾರ್ಯ ಮಾಡಿರುವುದು ಸಂತಸ ತಂದಿದೆ ಎಂದು ಅಭಿನವ ಪೂಜ್ಯಶ್ರೀ ಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು.

ಹಾವೇರಿಯಲ್ಲಿ ಬಸವರಾಜ ಬೊಮ್ಮಾಯಿ, ಬಿ.ವೈ, ವಿಜಯೇಂದ್ರ ನೇತೃತ್ವದಲ್ಲಿ ಬೃಹತ್ ರೋಡ್ ಶೋ

# ಕಾಂಗ್ರೆಸ್‌ನವರು ಗ್ಯಾರಂಟಿ ಕಾರ್ಡ್ ಕೊಡಲು ಬಂದರೆ ತಿರಸ್ಕರಿಸಿ

■ವಿಜಯಸಾಕ್ಷಿ ಸುದ್ದಿ, ಹಾವೇರಿ

ಕಾಂಗ್ರೆಸ್‌ನವರು ಗ್ಯಾರಂಟಿ ಕಾರ್ಡ್ ಕೊಡಲು ಬಂದರೆ ತಿರಸ್ಕರಿಸುವಂತೆ ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಹಾವೇರಿಯಲ್ಲಿ ಬುಧವಾರ ಬಿಜೆಪಿ ಜಿಲ್ಲಾ ಯುವ ಮೋರ್ಚಾ ವತಿಯಿಂದ ಏರ್ಪಡಿಸಿದ್ದ ಬೃಹತ್ ರೋಡ್ ಶೋ ಹಾಗೂ ಯುವ ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಾಂಗ್ರೆಸ್‌ನವರು ಮತ್ತೆ ಗ್ಯಾರಂಟಿ ಕಾರ್ಡ್ ಹಂಚಲು ಶುರು ಮಾಡಿದ್ದಾರೆ. ಹೆಣ್ಣು ಮಕ್ಕಳಿಗೆ ಒಂದು ಲಕ್ಷ ರೂ. ಕೊಡುವುದಾಗಿ ಹೇಳುತ್ತಿದ್ದಾರೆ. ಯುವಕರಿಗೆ ಒಂದು ಲಕ್ಷ ಕೊಡುತ್ತೇವೆ ಅಂತ ಹೇಳಿದ್ದಾರೆ. 543 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಸ್ಪರ್ಧಿಸಿರುವುದೇ 200 ಕ್ಷೇತ್ರಗಳಲ್ಲಿ. ಲೋಕಸಭೆಯಲ್ಲಿ ಬಹುಮತಕ್ಕೆ 272 ಸ್ಥಾನ ಬೇಕು. 200 ಸ್ಥಾನದಲ್ಲಿ ಸ್ಪರ್ಧಿಸಿರುವ ಇವರು ಅಧಿಕಾರಕ್ಕೆ ಬರಲು ಸಾಧ್ಯವೇ ಇಲ್ಲ. ಗ್ಯಾರಂಟಿ ಹೆಸರಿನಲ್ಲಿ ಜನರಿಗೆ ಮೋಸ ಮಾಡುತ್ತಿದ್ದಾರೆ ಎಂದು ಹೇಳಿದರು.



ರಾಜ್ಯ ಈಗ ಕೊಡುತ್ತಿರುವ ಗ್ಯಾರಂಟಿನೇ ಗಳಗಂಟಿಯಾಗಿದ್ದಾವೆ. ಗೃಹಲಕ್ಷ್ಮೀ ಯೋಜನೆ ಎಷ್ಟು ಜನರಿಗೆ ತಲುಪಿದೆ. ಬೆಂಗಳೂರು ಬಿಟ್ಟಿದೆ. ಊರುಗಳಿಗೆ ಬಂದಿಲ್ಲ. ಕೇವಲ ಪ್ರಗತಿಯಲ್ಲಿದೆ ಅಂತ ಹೇಳುತ್ತಾರೆ. ಬಹುತೇಕರಿಗೆ ಗ್ಯಾರಂಟಿ ತಲುಪುತ್ತಿಲ್ಲ ಎಂದು ಹೇಳಿದರು.


ಹಾವೇರಿ, ಗದಗ ಜಿಲ್ಲೆ ಮಾಡಿದ್ದು ಜೆ ಎಚ್ ಪಟೇಲರು, ತುಂಗಾ ಮೇಲ್ದಂಡೆ ಯೋಜನೆ ಯಡಿಯೂರಪ್ಪ ಸಿಎಂ ಆಗಿದ್ದಾಗ ನಾನು ನೀರಾವರಿ ಸಚಿವನಾಗಿದ್ದಾಗ ಜಾರಿ ಮಾಡಿದ್ದೇವು. ಗದಗ ಜಿಲ್ಲೆಯಲ್ಲಿ ಸಿಂಗಟಾಲೂರು ಯೋಜನೆ ಜಾರಿ ಮಾಡಿದ್ದು ಬಿಜೆಪಿ ಸರ್ಕಾರ. ಯಡಿಯೂರಪ್ಪ ಸಿಎಂ ಆಗಿದ್ದಾಗ ಹಾವೇರಿ ಜಿಲ್ಲೆಯಲ್ಲಿ ಎಂಟು ಏತ ನೀರಾವರಿ ಯೋಜನೆಗಳನ್ನು ಮಾಡಿದ್ದೇವೆ. ಅವು ಶೇ 90 ರಷ್ಟು ಕಾರ್ಯ ಮುಕ್ತಾಯವಾಗಿದೆ. ಅದನ್ನು ಪೂರ್ಣಗೊಳಿಸಲು ಈಗಿನ ಸರ್ಕಾರಕ್ಕೆ ಆಗಿಲ್ಲ.

ಹಾವೇರಿಗೆ ಮೆಡಿಕಲ್ ಕಾಲೇಜ್, ಮೆಗಾ ಡೈರಿ ನಾವು ಅಧಿಕಾರದಲ್ಲಿದ್ದಾಗ ತಂದಿದ್ದೇವೆ. ವಿಶ್ವ ವಿದ್ಯಾಲಯ ನಾವು ತಂದಿದ್ದೇವೆ ಅದಕ್ಕೆ ಹಣ ಕೊಡಲು ಇವರಿಗೆ ಆಗುತ್ತಿಲ್ಲ. ಈ ಜಿಲ್ಲೆಗೆ ಒಬ್ಬ ಮಂತ್ರಿ ಮಾಡಲು ಇವರಿಗೆ ಆಗುತ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

ದೇಶಕ್ಕೆ ಮೋದಿ ಮತ್ತೆ ಬರಬೇಕಿದೆ. ಸೋನಿಯಾ ಗಾಂಧಿ ತಮ್ಮ ಸುತ್ತಲೂ ಕತ್ತಲಿದೆ ಎಂದು ಹೇಳಿದ್ದಾರೆ. ನಿಮ್ಮ ಸುತ್ತಲೂ ಇನ್ನೂ ಹತ್ತು ವರ್ಷ ಕತ್ತಲು ಇರುತ್ತದೆ. ದೇಶಾದ್ಯಂತ ಬೆಳಕು ಇರುತ್ತದೆ.

ಮೋದಿಯವರು ಕೊರೋನಾ ಸಂದರ್ಭದಲ್ಲಿ ಎಲ್ಲರಿಗೂ ಲಸಿಕೆ ಕೊಟ್ಟಿದ್ದಾರೆ. ಮನೆ ಮನೆಗೆ ನೀರು ಕೊಡುತ್ತಿದ್ದಾರೆ. ಮನೆ ಮನೆಗೆ ಅನ್ನ ಕೊಡುತ್ತಿದ್ದಾರೆ. ರೈತನಿಗೆ ಕಿಸಾನ್ ಸನ್ಮಾನ ನೀಡಿದ್ದಾರೆ. ಅವರಿಗೆ ಮತ ಹಾಕುವ ಮೂಲಕ ಕೃತಜ್ಞತೆ ಸಲ್ಲಿಸಬೇಕು ಎಂದು ಮನವಿ ಮಾಡಿದರು.

# ಶ್ರೀ ಕರಿಯಮ್ಮದೇವಿ ಮಹಾರಥೋತ್ಸವ ಸಂಪನ್ನ



■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ಕರಿಯಮ್ಮದೇವಿಯ 95ನೇ ಜಾತ್ರಾ ಮಹೋತ್ಸವದ ಅಂಗವಾಗಿ ಏ.9ರಂದು ಮಹಾರಥೋತ್ಸವವು ಸಕಲ ಮಂಗಳ ವಾದ್ಯಗಳೊಂದಿಗೆ ಶ್ರೀ ಕರಿಯಮ್ಮದೇವಿಯ ಪಾಲಕಿ ಉತ್ಸವ, ಸಾವಿರಾರು ಸುಮಂಗಲೆಯರಿಂದ ಕುಂಭ ಮೇಳ ಹಾಗೂ ಶ್ರೀ ಚಕ್ರ ಮಹಿಳಾ ಕಲಾತಂಡದವರಿಂದ ಡೊಳ್ಳು ಕುಣಿತ ಹಾಗೂ ಗೊಂಬೆ ಕುಣಿತಗಳೊಂದಿಗೆ ಅದ್ದೂರಿಯಾಗಿ ಜರುಗಿತು.

ಈ ಸಂದರ್ಭದಲ್ಲಿ ಹರಗುರುಚರ ಮೂರ್ತಿಗಳು ಸೇರಿದಂತೆ, ಶ್ರೀ ಕರಿಯಮ್ಮದೇವಿ ಬಡಾವಣಾ ಸುಧಾರಣಾ ಸಮಿತಿಯ ಅಧ್ಯಕ್ಷ ಸಿ.ಕೆ. ಮಾಳಶೆಟ್ಟಿ, ಜಾತ್ರಾ ಸಮಿತಿಯ ಅಧ್ಯಕ್ಷ ಜಗದೀಶ ಪೂಜಾರ, ನಗರಸಭೆ ಸದಸ್ಯರಾದ ವಿಜಯಲಕ್ಷ್ಮೀ ಶಶಿಧರ ದಿಂಡೂರ, ಗಣ್ಯ ವ್ಯಾಪಾರಸ್ಥರಾದ ಶಂಕರ ಹಾನಗಲ್ಲ ದಂಪತಿಗಳು, ಸಮಿತಿಯ ಸದಸ್ಯರಾದ ಎಸ್.ಬಿ. ಹಡಗಲಿ, ಎಸ್.ಬಿ. ಕಣವಿ, ಎಂ.ಡಿ. ದೇಸಾಯಿಗೌಡ್ರ, ಪಿ.ಎಸ್. ಕುರಹಟ್ಟಿ, ಬಸವರಾಜ ನರೇಗಲ್ಲ, ಜೆ.ಕೆ. ತಮ್ಮಣ್ಣವರ, ವಾಯ್.ಕೆ. ಪಿಡಗಣ್ಣವರ, ಪಿ.ಬಿ. ಹಿರೇಮಠ, ಹೆಚ್.ಬಿ. ಶಿರಗುಂಪಿ, ಎಸ್.ಎ. ಹೊಳೆಯಣ್ಣವರ, ಆರ್.ಬಿ. ಕುಲಕರ್ಣಿ, ಗುರಣ್ಣ ಕಲಕೇರಿ, ಮಹಾಂತೇಶ ಬೆಳಗಲಿ, ಮುತ್ತು ಮಾಲಗಿತ್ತಿ, ಕಿರಣ ಆರಟ್ಟಿ, ಬಸವರಾಜ ಅಣ್ಣಿಗೇರಿ, ಆನಂದ ಕಂಪ್ಲಿ, ಹಿರಿಯ ಮುಖಂಡರಾದ ಶಶಿಧರ ದಿಂಡೂರ, ರಾಜು ಪರಮಣ್ಣವರ, ಸುನೀಲ ಕುಂದಗೋಳ ಸೇರಿದಂತೆ ಶ್ರೀ ಕರಿಯಮ್ಮದೇವಿ ದೇವಸ್ಥಾನ ಸುಧಾರಣಾ ಸಮಿತಿಯ ಸರ್ವ ಸದಸ್ಯರು, ಜಾತ್ರಾ ಕಮಿಟಿಯ ಸರ್ವ ಸದಸ್ಯರು, ಹಿರಿಯರು, ಮುಖಂಡರು ಹಾಗೂ ಗದಗ-ಬೆಟಗೇರಿ ನಗರದ ಶ್ರೀ ಕರಿಯಮ್ಮದೇವಿಯ ಸದ್ಭಕ್ತರು ಪಾಲ್ಗೊಂಡು ದೇವಿಯ ಕೃಪೆಗೆ ಪಾತ್ರರಾದರು.

# ರಂಜಾನ್ ನಿಮಿತ್ತ ಆಹಾರ ಕಿಟ್ ವಿತರಣೆ



■ವಿಜಯಸಾಕ್ಷಿ ಸುದ್ದಿ, ರೋಣ

ಸ್ವಾಭಿಮಾನಿ ಕರ್ನಾಟಕ ರಕ್ಷಣಾ ವೇದಿಕೆ ರೋಣ ತಾಲೂಕು ಘಟಕದ ವತಿಯಿಂದ ರೋಣ ತಾಲೂಕಾಧ್ಯಕ್ಷ ಎಮ್.ಎಚ್. ನದಾಫರ ನೇತೃತ್ವದಲ್ಲಿ ರೋಣ ನಗರದಲ್ಲಿ, ಹೊಳೆಆಲೂರು ಗ್ರಾಮದಲ್ಲಿ ರಂಜಾನ್ ಹಬ್ಬದ ನಿಮಿತ್ತ ಬಡವರಿಗೆ ಮತ್ತು ವಿಧವೆಯರಿಗೆ ಆಹಾರ್ ಕಿಟ್ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ರೋಣ ವಿದ್ಯಾರ್ಥಿ ಘಟಕದ ಅಧ್ಯಕ್ಷ ಅಭಿಷೇಕ್ ಕೊಪ್ಪದ, ಯಮನೂರು ಭೈ. ಮೊಹಮ್ಮದ್ ಗೌಸ್, ಪಕೀರಸಾಬ ನದಾಫ, ಪ್ರವೀಣ ಕರುಗಲ, ಲಾಲಸಾಬ ಹಿರೇಮನಿ ಮುಂತಾದವರು ಉಪಸ್ಥಿತರಿದ್ದರು.

# ದಿಂಗಾಲೇಶ್ವರ ಶ್ರೀಗಳು ಪರಂಪರೆಯನ್ನು ಅರಿಯಲಿ

▶▶ಮೊದಲನೇ ಪುಟದಿಂದ

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣ ಹಾಳಾಗಿದ್ದು, ಮುಖ್ಯಮಂತ್ರಿಗಳಿಗೆ ಮಾಲಾರ್ಪಣೆ ಮಾಡಲು ಬಂದ ವ್ಯಕ್ತಿ ರಿಯಾಜ್ ಲೋಡೆಡ್ ಗನ್ ಹಿಡಿದು ಬಂದಿದ್ದೇ ಇದಕ್ಕೆ ಉದಾಹರಣೆಯಾಗಿದೆ. ಒಂದು ಸಮುದಾಯವನ್ನು ತುಷ್ಟೀಕರಣ ಮಾಡುವ ರಾಜ್ಯದ ಈ ನಿಲುವಿನಿಂದಾಗಿ ರಾಜ್ಯದಲ್ಲಿ ಕಾನೂನು ಸುವಸ್ಯಸ್ಥೆಗೆ ಧಕ್ಕೆಯಾಗಿದೆ. ಸರಕಾರ ಈ ರೀತಿ ಸಣ್ಣ ಸಣ್ಣ ಘಟನೆಗಳನ್ನು ನಿರ್ಲಕ್ಷ್ಯ ಮಾಡುತ್ತಿದೆ. ಆದರೆ ಮುಂದೆ ಇದರ ಪರಿಣಾಮ ಅತ್ಯಂತ ಗಂಭೀರವಾಗಿರುತ್ತದೆ ಎಂದು ಎಚ್ಚರಿಸಿದರು.

# ಕೆಂಚಮ್ಮದೇವಿ ಜಾತ್ರಾ ಮಹೋತ್ಸವ ಸಂಪನ್ನ



■ವಿಜಯಸಾಕ್ಷಿ ಸುದ್ದಿ, ಡಂಬಳ

ಯುಗಾದಿ ಹಬ್ಬದ ಪ್ರಯುಕ್ತ ಕೆಂಚಮ್ಮದೇವಿ ಜಾತ್ರಾ ಮಹೋತ್ಸವವು ಬೀರಲಿಂಗೇಶ್ವರ ಡೊಳ್ಳು ಕುಣಿತ ಹಾಗೂ ಮೆರವಣಿಗೆಯೊಂದಿಗೆ ನೂರಾರು ಭಕ್ತರ ಸಮ್ಮುಖದಲ್ಲಿ ಸಂಭ್ರಮ ಸಡಗರದಿಂದ ನಡೆಯಿತು. ಸಾಂಪ್ರದಾಯಕ ಬಂಡಾರವನ್ನು ಭಕ್ತರು ಪರಸ್ಪರ ಮುಖಕ್ಕೆ ಹಚ್ಚಿಕೊಂಡು ಮೆರವಣಿಗೆಂಯುುದ್ದಕ್ಕೂ ಸಂಭ್ರಮಿಸಿದರು.

ಮೆರವಣಿಗೆ ಸಂದರ್ಭದಲ್ಲಿ ವಿವಿಧ ಜಾತಿ-ಧರ್ಮಗಳ ಭಕ್ತರು ಪಾಲ್ಗೊಳ್ಳುವ ಮೂಲಕ ಸೌಹಾರ್ದತೆಗೆ ಸಾಕ್ಷಿಯಾದರು. ನಂತರ ಮಹಿಳೆಯರು ದೇವರಿಗೆ ಉಡಿ ತುಂಬುವ ಮೂಲಕ ತಮ್ಮ ಭಕ್ತಿ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಜಾತ್ರಾ ಕಮಿಟಿಯ ಹಿರಿಯರಾದ ಮರಿಯಪ್ಪ ಸಿದ್ದಣ್ಣವರ, ಕೆ.ಎನ್. ದೊಡ್ಡಮನಿ, ದೇವಪ್ಪ ತಳಗೇರಿ, ಮೈಲೆಪ್ಪ ಹರಿಜನ, ರಂಗಪ್ಪ ಪೂಜಾರ, ಮಾಯಪ್ಪ ತಳಗೇರಿ, ನಿಂಗಪ್ಪ ಮಾದರ, ಕೆಂಚಪ್ಪ ಪೂಜಾರ, ದೇವಪ್ಪ ಗೌಡಣ್ಣವರ, ಸೋಮಪ್ಪ ತಳಗೇರಿ, ಬಸವರಾಜ ವಗ್ಗರಣಿ, ಅರ್ಜುನಪ್ಪ ಪೂಜಾರ, ಮಲ್ಲಪ್ಪ ಪೂಜಾರ, ಹನಮಂತ ಮೇವುಂಡಿ, ಮೈಲೆಪ್ಪ ಬೆಟಗೇರಿ, ಯಮನೂರ ದೊಡ್ಡಮನಿ, ಬಸುರಾಜ ದೊಡ್ಡಮನಿ ಸೇರಿದಂತೆ ಜಾತ್ರಾ ಕಮಿಟಿಯ ಎಲ್ಲಾ ಪದಾಧಿಕಾರಿಗಳು, ಭಕ್ತಾದಿಗಳು ಇದ್ದರು.

# ವಿಕಲಚೇತನರಿಂದ ಬೈಕ್ ರ್ಯಾಲಿ




■ವಿಜಯಸಾಕ್ಷಿ ಸುದ್ದಿ, ಗದಗ

ಸಾರ್ವತ್ರಿಕ ಲೋಕಸಭಾ ಚುನಾವಣೆಯ ಪ್ರಯುಕ್ತ ಜಿಲ್ಲಾ ಸ್ವೀಪ್ ಸಮಿತಿಯಿಂದ ಮತದಾರರಲ್ಲಿ ಜಾಗೃತಿ ಮೂಡಿಸಲು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಗದಗ-ಬೆಟಗೇರಿ ನಗರಸಭೆ ವತಿಯಿಂದ ವಿಕಲಚೇತನರಿಂದ ಬೈಕ್ ರ್ಯಾಲಿ ಮೂಲಕ ಮತದಾನ ಜಾಗೃತಿ/ಅರಿವು ಮೂಡಿಸುವ ಕಾರ್ಯಕ್ರಮ ಜರುಗಿತು. ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ರ್ಯಾಲಿಗೆ ಚಾಲನೆ ನೀಡಿದರು.

ರ್ಯಾಲಿಯು ಭೂಮರಡ್ಡಿ ಸರ್ಕಲ್‌ನಿಂದ ಗಾಂಧಿ ವೃತ್ತದವರೆಗೆ ಬಂದು ತಲುಪಿತು. ವಿಕಲಚೇತನರ ಯಂತ್ರಚಾಲಿತ ತ್ರಿಚಕ್ರ ವಾಹನದಲ್ಲಿ ರ್ಯಾಲಿ ಮಾಡುವುದರ ಮೂಲಕ 18 ವರ್ಷ ಮೇಲ್ಪಟ್ಟ ಅರ್ಹ ಮತದಾರರು ಹಾಗೂ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ತಮ್ಮ ಮತವನ್ನು ಚಲಾಯಿಸಲು ಹಾಗೂ ವಿಶೇಷವಾಗಿ ವಿಕಲಚೇತನರು ಮತ ಚಲಾಯಿಸುವ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ ಉಪಕಾರ್ಯದರ್ಶಿ ಸಿ.ಬಿ. ದೇವರಮನಿ, ಗದಗ-ಬೆಟಗೇರಿ ನಗರಸಭೆ ಆಯುಕ್ತ ಪ್ರಶಾಂತ ವರಗಪ್ಪನವರ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಅಧಿಕಾರಿ ಕೆ.ಮಹಾಂತೇಶ, ಜಿಲ್ಲೆಯ ಎಲ್ಲಾ ತಾಲೂಕಿನ ಎಮ್.ಆರ್.ಡಬ್ಲ್ಯೂ, ವಿ.ಆರ್.ಡಬ್ಲ್ಯೂ & ಯು.ಆರ್.ಡಬ್ಲ್ಯೂಗಳು ಹಾಗೂ ವಿಕಲಚೇತನರು ಪಾಲ್ಗೊಂಡಿದ್ದರು.

# ಬಸವರಾಜ ಬೊಮ್ಮಾಯಿಯವರನ್ನು ಬೆಂಬಲಿಸಿ

■ವಿಜಯಸಾಕ್ಷಿ ಸುದ್ದಿ, ರೋಣ

3 ವರ್ಷಗಳ ಕಾಲ ರಾಜ್ಯದ ಮುಖ್ಯಮಂತ್ರಿಗಳಾಗಿ ಅನೇಕ ಜನಪರ, ಅಭಿವೃದ್ಧಿಯ ಪರವಾದ ಯೋಜನೆಗಳನ್ನು ಜಾರಿಗೆ ತದು, ರಾಜ್ಯದ ಪ್ರತಿಯೊಬ್ಬ ಜಾತಿ, ಜನಾಂಗಕ್ಕೂ ಸಮಾಜಿಕ ನ್ಯಾಯ ಕಲ್ಪಿಸುವ ಕೆಲಸ ಮಾಡಿದ್ದ ಹಾವೇರಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರಿಗೆ ಮತ ನೀಡುವದರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿ ಪಕ್ಷಕ್ಕೆ ಶಕ್ತಿ ತುಂಬಬೇಕು ಎಂದು ಮಾಜಿ ಸಚಿವ ಕಳಕಪ್ಪ ಬಂಡಿ ಮತದಾರರಲ್ಲಿ ಮನವಿ ಮಾಡಿದರು.



ಹಾವೇರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವರ ಪರವಾಗಿ ಕ್ಷೇತ್ರದ ನೆಲ್ಲೂರ, ಬಳಗೋಡ, ಹೊನ್ನಿಗನೂರು, ತಳ್ಳಿಹಾಳ, ಚಿಕ್ಕ ಅಳಗುಂಡಿ, ಗ್ರಾಮಗಳಲ್ಲಿ ಪ್ರಚಾರ ನಡೆಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಜನವಿರೋಧಿ ಆಡಳಿತ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಉತ್ತರ ನೀಡುವ ಕಾಲ ಇದೀಗ ಬಂದಿದೆ ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ರೋಣ ಮಂಡಲ ಅಧ್ಯಕ್ಷ ಮುತ್ತಣ್ಣ ಕಡಗದ, ಪ್ರಧಾನ ಕಾರ್ಯದರ್ಶಿ ಉಮೇಶ್ ಮಲ್ಲಾಪುರ್, ಮುಖಂಡರಾದ ಶಿವಾನಂದ ಮಠದ, ಸಿದ್ದಣ್ಣ ಬಳಗೇರ್, ರಾಜನ ಗೌಡ ಗೌಡ್ರು, ಎಂ.ಪಿ. ಪಾಟೀಲ್, ಬಸವರಾಜ್ ದೇಸಾಯಿ, ಸಂಗಪ್ಪ ಲಗುವಗಿ, ರಮೇಶ ವಕ್ಕರ, ಶರಣಪ್ಪ ಪ್ಯಾಟಿ, ಹನುಮಂತ ಲಗಳಿ, ಶಿವಪುತ್ರಪ್ಪ ಇಟಗಿ ಮುಂತಾದವರು ಇದ್ದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ಆರೋಗ್ಯ ಇಲಾಖೆಯ ಕಾರ್ಯಕ್ರಮ

# ಮತದಾನ ಜಾಗೃತಿ ಜಾಥಾ




■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆ ಹಿನ್ನೆಲೆಯಲ್ಲಿ ಮತದಾರರ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಬೆಟಗೇರಿ ಬಸ್ ನಿಲ್ದಾಣದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮತ್ತು ಗದಗ ತಾ.ಪಂ ಅಧಿಕಾರಿ ಮಾಣಿಕರಾವ್ ಪಾಟೀಲ್ ಚಾಲನೆ ನೀಡಿದರು.

ಲೋಕಸಭಾ ಚುನಾವಣೆ-2024ರ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ 'ಮತ ಚಲಾವಣೆ ನಿಮ್ಮ ಹಕ್ಕು-ತಪ್ಪದೇ ನಿಮ್ಮ ಮತ ಚಲಾಯಿಸಿ' ಎಂಬ ಘೋಷ ವಾಕ್ಯದೊಂದಿಗೆ ಅರಿವು ಮೂಡಿಸುವ ಮುಖಾಂತರ ಜಾಥಾವು ಬೆಟಗೇರಿ ಬಸ್ ನಿಲ್ದಾಣದಿಂದ ಕನ್ಯಾಳ ಅಗಸಿ, ಗಾರಗಿಪೇಟೆ, ಒಕ್ಕಲಗೇರಿ ಮುಖಾಂತರ ಕುರಹಟ್ಟಿ ಪೇಟೆಯವರೆಗೆ ಬಂದು ತಲುಪಿತು. ಗದಗ ತಾಲೂಕಿನ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವಾಯ್.ವಾಯ್. ಹಕ್ಕಿಯವರು ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ಈ ಸಂದರ್ಭದಲ್ಲಿ ಗದಗ ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಖೋನಾ, ವೈದ್ಯಾಧಿಕಾರಿ ಸ್ಪರ್ಶಾ ಚಿನ್ನಪ್ಪಗೌಡರ, ಡಾ. ಮಧುಮತಿ, ಡಾ. ಮಹೇಶ ಕೊಪ್ಪಳ, ಡಾ. ಜಯಕುಮಾರ ಬ್ಯಾಳಿ, ಜಿಲ್ಲಾ ಉಪ ಆರೋಗ್ಯ ಶಿಕ್ಷಣಧಿಕಾರಿ ಉಮೇಶ ಕರಮುಡಿ, ಗದಗ ತಾಲೂಕಿನ ಆರೋಗ್ಯ ನಿರೀಕ್ಷಣಾಧಿಕಾರಿ ಎಸ್.ಎನ್. ಲಿಂಗದಾಳ, ಅಜಯಕುಮಾರ ಕಲಾಲ, ಕೃಷ್ಣಾ ಗಡರೆಡ್ಡಿ, ಏಕನಾಥ ಪಾಟೀಲ್, ನಾಗರಾಜ ಜೋಶಿ, ಬಿ.ಸಿ. ಹಿರೇಹಾಳ, ಎನ್.ಎನ್. ಪಾಟೀಲ್, ಪ್ರಭು ಹೊನ್ನಗುಡಿ, ಎಸ್.ಬಿ. ಗಡಾದ, ಎಂ.ಹೆಚ್. ಕದಾಂಪೂರ, ವಾಯ್.ಎನ್. ಕಡೇಮನಿ, ನವೀನ ಶಾಂವತ, ಪ್ರಾಥಮಿಕ ಸುರಕ್ಷಾ ಅಧಿಕಾರಿ ಎಂ.ಬಿ. ಹೆಬ್ಬಾಳ, ಎಸ್. ಎಸ್. ಕಟ್ಟಿಮನಿ, ಸಮುದಾಯ ಅರೋಗ್ಯ ಅಧಿಕಾರಿ ಚಂದ್ರ ಪೂಜಾರ, ಮಹೇಶ ಭಜಂತ್ರಿ, ಮತ್ತು ಜಿಲ್ಲಾ ಆಶಾ ಮೆಂಟರ್ ಸುನಿತಾ ಉಮಚಗಿ, ತಾಲೂಕಾ ಆಶಾ ಮೆಂಟರ್ ನವೀನಕುಮಾರಿ ಹಾಗೂ ಗದಗ ತಾಲೂಕಿನ ಆಶಾ ಕಾರ್ಯಕರ್ತೆಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# 'ದೀಪ ನಡಿಗೆ' ಮತದಾನ ಜಾಗೃತಿ ಜಾಥಾ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮತದಾನ ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದ್ದು, ಪವಿತ್ರವಾದ ಮತದಾನದಿಂದ ಸುಭದ್ರ ಪ್ರಜಾಪ್ರಭುತ್ವ ರಾಷ್ಟ್ರ ನಿರ್ಮಾಣ ಸಾಧ್ಯ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ತಾವು ವಾಸಿಸುವ ಪ್ರದೇಶ, ಗ್ರಾಮ, ವೃತ್ತಿ ಕ್ಷೇತ್ರಗಳಲ್ಲಿ ಕಡ್ಡಾಯವಾಗಿ ಮತದಾನ ಮಾಡುವಂತೆ ಪ್ರೇರೇಪಿಸಬೇಕು ಎಂದು ತಾ.ಪಂ ಇಓ ಕೃಷ್ಣಪ್ಪ ಧರ್ಮರ ಹೇಳಿದರು.

ಅವರು ಮಂಗಳವಾರ ಪಟ್ಟಣದಲ್ಲಿ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತಾಲೂಕಾ ಶಿಶು ಅಭಿವೃದ್ಧಿ ಕಚೇರಿ ಮತ್ತು ತಾ.ಪಂ ಸಹಯೋಗದಲ್ಲಿ ದೀಪ ನಡಿಗೆ ಮತದಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಪಟ್ಟಣದ ಪೊಲೀಸ್ ಠಾಣೆಯಿಂದ ಪ್ರಾರಂಭಗೊಂಡ ಜಾಥಾ ಇಂದಿರಾನಗರ, ಕಲಾಂ ನಗರ, ಮುಕ್ತಿ ನಗರ, ಬಸವೇಶ್ವರ ನಗರದ ಮೂಲಕ ಹೊಸ ಬಸ್ ನಿಲ್ದಾಣದಲ್ಲಿ ಸಂಪನ್ನಗೊಂಡಿತು. ಈ ವೇಳೆ ಮಾತನಾಡಿದ ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ, ಮೇ 7ರಂದು ನಡೆಯುವ ಲೋಕಸಭೆ ಚುನಾವಣೆಯಲ್ಲಿ ಶೇ.100ರಷ್ಟು ಮತದಾನವಾಗಬೇಕು. ಪ್ರತಿಯೊಬ್ಬ ಮತದಾರರೂ ನಿರ್ಭೀತರಾಗಿ ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಆಸೆ-ಆಮಿಷ, ಪ್ರೇರಣೆಗಳಿಗೆ ಒಳಗಾಗದೆ ಪ್ರಜಾಪ್ರಭುತ್ವ ವ್ಯವಸ್ಥೆ ಗಟ್ಟಿಗೊಳಿಸುವ ಮೂಲಕ ಬಲಿಷ್ಠ ರಾಷ್ಟ್ರ ನಿರ್ಮಾಣಕ್ಕೆ ಮುನ್ನುಡಿ ಬರೆಯಲು ಕಡ್ಡಾಯ ಮತದಾನ ಮಾಡಬೇಕು ಎಂದು ಹೇಳಿದರು.

ಈ ವೇಳೆ ಪಿಎಸ್ಐ ಈರಣ್ಣ ರಿತ್ತಿ, ರಮೇಶ ರಾಠೋಡ, ನಂದಾ ನವಲೆ, ಗೀತಾ ಮುಳಗುಂದ, ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು, ಮಹಿಳಾ ಸ್ವ-ಸಹಾಯ ಸಂಘದ ಮಹಿಳೆಯರು, ಕೆಎಸ್ಆರ್‌ಟಿಸಿ ಸಿಬ್ಬಂದಿ ಪಾಲ್ಗೊಂಡಿದ್ದರು.




ಗದಗ: ತೋಂಟದಾರ್ಯ ಜಾತ್ರಾ ಮಹೋತ್ಸವದ ಪ್ರಯುಕ್ತ ತೇರಿನ ಗಾಲಿ ಪೂಜಾ ಕಾರ್ಯಕ್ರಮವು ಪೂಜ್ಯ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಮತ್ತು ಭೈರನಹಟ್ಟಿ ಪೂಜ್ಯ ಶ್ರೀ ಶಾಂತಲಿಂಗ ಮಹಾಸ್ವಾಮಿಗಳವರ ಸಾನ್ನಿಧ್ಯದಲ್ಲಿ ಶ್ರೀಮಠದ ಸದ್ಭಕ್ತರ ಸಮ್ಮುಖದಲ್ಲಿ ನೇರವೆರಿತು. ಜಾತ್ರಾ ಸಮಿತಿಯ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರು, ಜಾತ್ರಾ ಸಮಿತಿಯ ಸರ್ವ ಪದಾಧಿಕಾರಿಗಳು, ಲಿಂಗಾಯತ ಪ್ರಗತಿಶೀಲ ಸಂಘದ ಪದಾಧಿಕಾರಿಗಳು, ಎಸ್. ಎಸ್. ಕಳಸಾಪೂರಶೆಟ್ಟರ, ಮ್ಯಾನೇಜರ್ ಎಂ.ಎಸ್. ಅಂಗಡಿ, ಶ್ರೀಮಠದ ಸದ್ಭಕ್ತರು ಹಾಜರಿದ್ದರು.

# ತಿಮ್ಮಾಪೂರದ ಶ್ರೀ ಮಾರುತೇಶ್ವರ ಜಾತ್ರೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ತಿಮ್ಮಾಪೂರ ಗ್ರಾಮದಲ್ಲಿ ಯುಗಾದಿ ಹಬ್ಬದ ಅಂಗವಾಗಿ ಶ್ರೀ ಮಾರುತೇಶ್ವರ ಮಹಾ ರಥೋತ್ಸವ ಏಪ್ರಿಲ್ 12ರಂದು ಜರುಗಲಿದೆ. ಅಂದು ಮಾರುತಿ ದೇವರ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಸಂಜೆ 5.30 ಗಂಟೆಗೆ ರಥೋತ್ಸವ ನೆರವೇರಲಿದೆ.



ರಥೋತ್ಸವದಲ್ಲಿ ಜಾನಪದ ಕಲಾ ವಾದ್ಯ ತಂಡಗಳಾದ ಡೊಳ್ಳಿನ ಮೇಳ, ಜಾಜ್ ಮೇಳ, ವೇಶ್ಯೆಗಾತಿ ಕುಣಿತಗಳ ಕಲಾತಂಡಗಳು ಭಾಗವಹಿಸಲಿವೆ.

ಇದಕ್ಕೂ ಪೂರ್ವದಲ್ಲಿ ಏ.11ರಂದು ರಾತ್ರಿ 9.30ಕ್ಕೆ ಬಣ್ಣದ ಹೊಂಡ ತುಳಿಕಿಸುವುದು, ನಂತರ ಲಘು ರಥೋತ್ಸವ ಜರುಗಲಿದ್ದು, ಏಪ್ರಿಲ್ 9ರಂದು ಗೋಪಾಳ ದಾಸಂಗ ತುಂಬಿಸುವುದು, 10ರಂದು ದೀಪ ಮಾಲಿ ಕಂಬಕ್ಕೆ ಅಭಿಷೇಕ ನೆರವೇರಿತು ಎಂದು ಜಾತ್ರಾ ಟ್ರಸ್ಟ್ ಕಮಿಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಾಸಲಾಪೂರ ಗ್ರಾಮದಲ್ಲಿ ಕಾರ್ಮಿಕರಿಗೆ ಕಡ್ಡಾಯ ಮತದಾನ ಜಾಗೃತಿ, ಪ್ರತಿಜ್ಞಾ ವಿಧಿ ಬೋಧನೆ

# ಉತ್ತಮ ಭಾರತಕ್ಕಾಗಿ ಮತ ಚಲಾಯಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ಸಂವಿಧಾನಬದ್ಧವಾಗಿ ಮತದಾನದ ಹಕ್ಕನ್ನು ಭಾರತದ ಪೌರರಾದ ನಾವೆಲ್ಲರೂ ಪಡೆದಿದ್ದೇವೆ. ಮತ ಚಲಾಯಿಸುವ ಮೂಲಕ ನೀವು ನಿಮ್ಮ ಅಭಿವೃದ್ಧಿ, ಗ್ರಾಮದ ಅಭಿವೃದ್ಧಿ, ದೇಶದ ಅಭಿವೃದ್ಧಿ ಮಾಡಲು ಸಾಧ್ಯ. ಹಾಗಾಗಿ ಅದನ್ನು ಲಘುವಾಗಿ ಪರಿಗಣಿಸದೆ, ತಪ್ಪದೇ ಮತದಾನ ಮಾಡಿ ಎಂದು ತಾಲೂಕ ಪಂಚಾಯಿತಿ ಕಾರ್ಯ ನಿರ್ವಾಹಕ ಅಧಿಕಾರಿ ಎಸ್.ಕೆ. ಇನಾಮದಾರ ಹೇಳಿದರು.




ರೋಣ ತಾಲೂಕಿನ ಚಿಕ್ಕಮಣ್ಣೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬಾಸಲಾಪೂರ ಗ್ರಾಮದಲ್ಲಿ ನರೇಗಾ ಯೋಜನೆಯಡಿಯಲ್ಲಿ ನಡೆದ ಸಮುದಾಯ ಕಾಮಗಾರಿಯ ಬದು ನಿರ್ಮಾಣ ಕಾಮಗಾರಿ ಸಂದರ್ಭದಲ್ಲಿ ಕಡ್ಡಾಯ ಮತದಾನ ಜಾಗೃತಿ ಹಾಗೂ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ನಂತರ ಮಾತನಾಡಿದ ಅವರು, ಉತ್ತಮ ಭಾರತಕ್ಕಾಗಿ ಮತ ಚಲಾಯಿಸುವ ಮೂಲಕ ನಾವು ನಮ್ಮ ಸ್ವಾತಂತ್ರ್ಯ ಹೋರಾಟಗಾರರನ್ನು ಮತ್ತು ನಮ್ಮ ಹಿಂದಿನ ತಲೆಮಾರುಗಳ ಹಿರಿಯರನ್ನು ಗೌರವಿಸಬಹುದು. ಮತದಾನ ಮಾಡುವುದು ನಮ್ಮ ನಾಗರಿಕ ಜವಾಬ್ದಾರಿ ಆಗಿದೆ ಎಂದರು.

ಚುನಾವಣೆಯಲ್ಲಿ ಮತ ಹಾಕುವ ಸ್ವಾತಂತ್ರ್ಯ ನಿಮಗಿದೆ.

> ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರಶೀದ್ ಹುಣಸಿಮರದ ಮತಾನಾಡಿ, ನರೇಗಾದಲ್ಲಿ ಕೆಲಸ ಮಾಡುವ ಕೂಲಿಕಾರರಿಗೆ ದಿನವೊಂದಕ್ಕೆ 349 ರೂ. ನೀಡಲಾಗುತ್ತದೆ. ಬೇಸಿಗೆಯ ಅವಧಿಯಲ್ಲಿ ಬಡ ಜನರಿಗೆ, ಅವರ ಮಕ್ಕಳಿಗೆ ಫೀ ತುಂಬಲು ನರೇಗಾ ಯೋಜನೆ ಅನುಕೂಲಕರವಾಗಿದೆ. ಅಲ್ಲದೇ ಈ ಹಣವನ್ನು ಕೂಲಿಕಾರರು ಮುಂಗಾರು ಆರಂಭದಲ್ಲಿ ಕೃಷಿ ಚಟುವಟಿಕೆಗಳಿಗೆ ಬಳಸಲು ಸಹಾಯವಾಗುತ್ತದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಮತ ಹಾಕಲು ಯಾರೂ ಆಮಿಷಕ್ಕೆ ಒಳಗಾಗಬೇಡಿ. ಉತ್ತಮ ನಾಳೆಗಳು ಬೇಕಾದರೆ ಮತದಾನ ಮಾಡುವ ಮೂಲಕ ಎಲ್ಲಾ ಅರ್ಹ ನಾಗರಿಕರು ಮತದಾನದ ಹಕ್ಕು ಚಲಾಯಿಸಬೇಕು. ಮತದಾರ ದೇಶದ ಉತ್ತಮ ಭವಿಷ್ಯಕ್ಕೆ ಬುನಾದಿ. ಮತದಾನ ಮಾಡುವ ಮೂಲಕ ಆ ಬುನಾದಿಯನ್ನು ಸದೃಢಗೊಳಿಸಿ ಎಂದರು.

ಕಳೆದ ಬಾರಿ ರೋಣ ತಾಲೂಕಿನಲ್ಲಿ ಮತದಾನ ಪ್ರಮಾಣ ಶೇ. 69 ಆಗಿದೆ. ಈ ಬಾರಿ ನೂರಕ್ಕೆ ನೂರರಷ್ಟು ಮಾಡುವ ಗುರಿಯನ್ನು ಹೊಂದಿದ್ದೇವೆ. ನಿಮ್ಮ ಗ್ರಾಮದಲ್ಲಿ 800ಕ್ಕೂ ಹೆಚ್ಚು ಮತಗಳು ಇವೆ. ಯಾವುದೇ ಕಾರಣಕ್ಕೂ ಯಾರೊಬ್ಬರೂ ಮತದಾನದಿಂದ ದೂರ ಉಳಿಯಬೇಡಿ ಎಂದರು.


ಈ ಸಂದರ್ಭದಲ್ಲಿ ಚಿಕ್ಕಮಣ್ಣೂರ ಗ್ರಾ.ಪಂ ಬಿಎಫ್‌ಟಿ ಈರಣ್ಣ ಬೇಲೆರಿ ನರೇಗಾ ಕೂಲಿಕಾರರಿಗೆ ಮತದಾನದ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು. ಗ್ರಾಮ ಪಂಚಾಯಿತಿ ಸಿಬ್ಬಂದಿಗಳು, ನರೇಗಾ ಸಿಬ್ಬಂದಿಗಳು, ಗ್ರಾಮಸ್ಥರು ಹಾಗೂ ನರೇಗಾ ಕೂಲಿಕಾರರು ಹಾಜರಿದ್ದರು.

ಮತಗಟ್ಟೆ ಅಧಿಕಾರಿಗಳಿಗೆ ತರಬೇತಿ ಕಾರ್ಯಗಾರ | ಜಿಲ್ಲಾಧಿಕಾರಿ ಭೇಟಿ

# ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಸಂಬಂಧಿಸಿ ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಗಾರ ಬುಧವಾರ ಜರುಗಿತು. ನಗರದ ಗುರುಬಸವ ಶಾಲೆ ಮತ್ತು ಶಿರಹಟ್ಟಿಯಲ್ಲಿ ನಡೆದ ತರಬೇತಿ ಕಾರ್ಯಾಗಾರಕ್ಕೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಭೇಟಿ ನೀಡಿ ವೀಕ್ಷಿಸಿದರು. ಎಲ್ಲ ಮತಗಟ್ಟೆ ಅಧಿಕಾರಿಗಳು ಕಾರ್ಯಾಗಾರಕ್ಕೆ ಆಗಮಿಸಿರುವ ಬಗ್ಗೆ ಮಾಹಿತಿ ಪಡೆದರು.



> ಪ್ರತಿ ಮತಗಟ್ಟೆಯಲ್ಲಿ ಮತಗಟ್ಟೆ ಅಧ್ಯಕ್ಷಾಧಿಕಾರಿ, ಸಹಾಯಕ ಮತಗಟ್ಟೆ ಅಧ್ಯಕ್ಷಾಧಿಕಾರಿ, ಎರಡನೇ ಮತಗಟ್ಟೆ ಅಧಿಕಾರಿ ಮತ್ತು ಮೂರನೇ ಮತಗಟ್ಟೆ ಅಧಿಕಾರಿ ಕರ್ತವ್ಯ ನಿರ್ವಹಿಸಲಿದ್ದಾರೆ ಎಂದು ಉಪ ವಿಭಾಗಾಧಿಕಾರಿ ವೆಂಕಟೇಶ ನಾಯ್ಕ್ ತಿಳಿಸಿದರು.

ಉಪ ವಿಭಾಗಾದಿಕಾರಿ ವೆಂಕಟೇಶ ನಾಯ್ಕ್ ಮಾತನಾಡಿ, ಮತಗಟ್ಟೆ ಅಧಿಕಾರಿಗಳು ಮತ್ತು ಸಹಾಯಕ ಮತಗಟ್ಟೆ ಅಧಿಕಾರಿಗಳು ಮಸ್ಟರಿಂಗ್, ಚುನಾವಣೆ ದಿನದಂದು ಅಣಕು ಮತದಾನ, ಮತದಾನ, ಮತದಾನ ಪೂರ್ಣಗೊಂಡ ನಂತರ ಅನುಸರಿಸಬೇಕಾದ ಕ್ರಮಗಳು, ಡಿಮಸ್ಟರಿಂಗ್ ಮತ್ತಿತರ ಕಾರ್ಯಗಳನ್ನು ಚುನಾವಣಾ ಆಯೋಗದ ನಿರ್ದೇಶನದಂತೆ ಕರ್ತವ್ಯ ನಿರ್ವಹಿಸಬೇಕು ಎಂದು ಅವರು ಹೇಳಿದರು.

ಲೋಕಸಭಾ ಚುನಾವಣೆ ಸಂಬಂಧ ಚುನಾವಣಾ ಆಯೋಗದ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಯಾವುದೇ ರೀತಿಯ ಗೊಂದಲಗಳಿಗೆ ಅವಕಾಶ ಮಾಡಬಾರದು ಎಂದರಲ್ಲದೆ, ಮತಗಟ್ಟೆ ಅಧಿಕಾರಿಗಳು ಪಾರದರ್ಶಕವಾಗಿ ಹಾಗೂ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು. ಚುನಾವಣೆಗೆ ಸಂಬಂಧಿಸಿದಂತೆ ಮಾಹಿತಿ ತಿಳಿದುಕೊಂಡಲ್ಲಿ ಸುಗಮವಾಗಿ ಚುನಾವಣಾ ಕರ್ತವ್ಯ ನಿರ್ವಹಿಸಬಹುದು ಎಂದರು.

ಲೋಕಸಭಾ ಚುನಾವಣೆಗೆ ನಿಯೋಜನೆ ಆಗಿರುವ ಮತಗಟ್ಟೆ ಅಧಿಕಾರಿಗಳು ಹಾಗೂ ಸಹಾಯಕ ಮತಗಟ್ಟೆ ಅಧಿಕಾರಿಗಳು ಕ್ರಮಬದ್ಧವಾಗಿ ಚುನಾವಣೆ ನಡೆಸಬೇಕು. ಸಂಶಯ ಇದ್ದಲ್ಲಿ ಸೆಕ್ಟರ್ ಅಧಿಕಾರಿಗಳ ಗಮನಕ್ಕೆ ತಂದು ಪರಿಹರಿಸಿಕೊಳ್ಳಬೇಕು. ವಿದ್ಯುನ್ಮಾನ ಮತಯಂತ್ರಗಳ ನಿರ್ವಹಣೆ, ಅಣಕು ಮತದಾನ ಮತ್ತಿತರ ಸಂಬಂಧ ಮತಗಟ್ಟೆ ಅಧಿಕಾರಿಗಳು ಜಾಗೃತಿ ವಹಿಸಬೇಕು. ಚುನಾವಣಾ ಪಾವಿತ್ರ್ಯತೆ ಕಾಪಾಡಬೇಕು ಎಂದು ಹೇಳಿದರು.

ಮಸ್ಟರಿಂಗ್, ಮತದಾನದಂದು ಮತ್ತು ಮತದಾನ ಪೂರ್ಣಗೊಂಡ ನಂತರ ಡಿಮಸ್ಟರಿಂಗ್ ಕಾರ್ಯನಿರ್ವಹಣೆ ಸಂಬಂಧಿಸಿದಂತೆ ಹಲವು ಮಾಹಿತಿ ನೀಡಿದರು. ಚುನಾವಣಾ ಕಾರ್ಯಕ್ಕೆ ನಿಯೋಜನೆಗೊಂಡ ಪ್ರತಿಯೊಬ್ಬ ಅಧಿಕಾರಿ, ಸಿಬ್ಬಂದಿ, ಏಜೆಂಟ್ ಅವರು ಚುನಾವಣೆ ಸಂಬಂಧ ಆಯೋಗದ ನಿರ್ದೇಶನ ಪಾಲಿಸಬೇಕು ಎಂದು ತಿಳಿಸಿದರು.

ಮತಗಟ್ಟೆ ಅಧಿಕಾರಿಗಳು ಅಣಕು ಮತದಾನ, ಪ್ರಮಾಣ ಪತ್ರ ಬರೆಯುವುದು, ಇವಿಎಂ, ಕಂಟ್ರೋಲ್ ಯುನಿಟ್, ಬ್ಯಾಲೆಟ್ ಯುನಿಟ್ ಹಾಗೂ ವಿವಿಪ್ಯಾಟ್ ಬಗ್ಗೆ ಸ್ಪಷ್ಟವಾಗಿ ತಿಳಿದುಕೊಳ್ಳಬೇಕು ಎಂದು ಹೇಳಿದರು. ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ ಸೇರಿದಂತೆ ಮತ್ತಿತರರು ಇದ್ದರು.


# ದ್ವಿತೀಯ ಪಿಯು ಪರೀಕ್ಷೆಯಲ್ಲಿ ಸಾಧನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷ ಹಾಗೂ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಗದಗ ತಾಲೂಕು ಅಧಿಕಾರಿಗಳಾಗಿರುವ ಡಾ. ಬಸವರಾಜ ಬಳ್ಳಾರಿ ಅವರ ಪುತ್ರಿ ಸ್ಫೂರ್ತಿ ಬಸವರಾಜ ಬಳ್ಳಾರಿ ಅವರು 2023-24ನೇ ಸಾಲಿನ ದ್ವಿತೀಯ ಪಿಯುಸಿ ವಿಜ್ಞಾನ ವಿಭಗದಲ್ಲಿ 600ಕ್ಕೆ 571 ಪಡೆಯುವ ಮೂಲಕ ಶೇ. 95.16ರಷ್ಟು ಅಂಕಗಳನ್ನು ಗಳಿಸಿ, ಕೊಪ್ಪಳ ಜಿಲ್ಲೆಯ ಚೇತನಾ ಪಿಯು ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.



ಇಂಗ್ಲೀಷ್-96, ಹಿಂದಿ-91, ಫಿಸಿಕ್ಸ್-95, ಕೆಮೆಸ್ಟ್ರಿ-95, ಮ್ಯಾಥಮೆಟಿಕ್ಸ್-94, ಬಯಾಲಜಿ-100ರಷ್ಟು ಅಂಕಗಳನ್ನು ಗಳಿಸುವ ಮೂಲಕ ಶೈಕ್ಷಣಿಕ ಸಾಧನೆ ಮೆರೆದ ಸ್ಫೂರ್ತಿ ಬಸವರಾಜ ಬಳ್ಳಾರಿ ಅವರಿಗೆ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ರವಿ ಗುಂಜೀಕರ, ಸಂಘದ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.




ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಶಿರಹಟ್ಟಿ ಮತಕ್ಷೇತ್ರ ಮಾಗಡಿ ಜಿ.ಪಂ ವ್ಯಾಪ್ತಿಯಲ್ಲಿ ನಡೆದ ಕಾಂಗ್ರೆಸ್ ಕಾರ್ಯಕರ್ತರ ಸಭೆಯಲ್ಲಿ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರನ್ನು ಗೌರವಿಸಲಾಯಿತು. ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಮಾಜಿ ಶಾಸಕರಾದ ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ವೀರಣ್ಣ ಅಂಗಡಿ, ವೀರಯ್ಯ ಮಠಪತಿ, ಶಿವನಗೌಡ್ರ, ವೀರೇಂದ್ರಗೌಡ ಪಾಟೀಲ, ಡಿ.ಕೆ. ಹೊನ್ನಪ್ಪನವರ, ಮೈಲಾರಪ್ಪ, ವಿ.ಜಿ. ಪಡಗೇರಿ, ವಿರುಪಾಕ್ಷಿ ನಂದೆಣ್ಣವರ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಜರಿದ್ದರು.

# ಸನ್ಮಾರ್ಗ ಕಾಲೇಜಿಗೆ ಉತ್ತಮ ಫಲಿತಾಂಶ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸ್ಟುಡೆಂಟ್ ಎಜ್ಯುಕೇಶನ ಸಂಸ್ಥೆಯ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ವಿದ್ಯಾಲಯದ ವಿದ್ಯಾರ್ಥಿಗಳು ಪ್ರಸಕ್ತ ಸಾಲಿನ ದ್ವಿತೀಯ ಪಿ.ಯು. ಪರೀಕ್ಷೆಯಲ್ಲಿ ಉತ್ತಮ ಸಾಧನೆಗೈದಿದ್ದಾರೆ.





ವಿಜ್ಞಾನ ಮತ್ತು ವಾಣಿಜ್ಯ ವಿಭಾಗದಲ್ಲಿ ಒಟ್ಟು ಸರಾಸರಿ ಶೇ.90 ಆಗಿದ್ದು, ವಿಜ್ಞಾನ ವಿಭಾಗದಲ್ಲಿ ಶೇ.96.17 ಅಂಕ ಗಳಿಸಿದ ಅಕ್ಷತಾ ಅಂಗಡಿ ಪ್ರಥಮ, ಶೇ.95.83 ಅಂಕಗಳೊಂದಿಗೆ ಲಕ್ಷ್ಮೀನರಸಿಂಹ ಹಲಗಿ ದ್ವಿತೀಯ ಹಾಗೂ ಕಾರ್ತಿಕ ಮಠಪತಿ ಶೇ.95.5 ಅಂಕ ಪಡೆದು ತೃತೀಯ ಸ್ಥಾನಗಳಿಸಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಒಟ್ಟು ಶೇ.97 ಗಳಿಸಿದ ಅಪೇಕ್ಷಾ ಪಾಲನಕರ ಪ್ರಥಮ, ಶೇ.95.67 ಅಂಕ ಗಳಿಸಿದ ಮೇಘಾ ಲಕ್ಷ್ಮೀಪುರ ದ್ವಿತೀಯ ಹಾಗೂ ಶೇ.95 ಅಂಕ ಗಳಿಸಿದ ಅಮೃತಾ ಪಾಟೀಲ ತೃತೀಯ ಸ್ಥಾನ ಗಳಿಸಿದ್ದಾರೆ.

ಈ ವರ್ಷದ ದ್ವಿತೀಯ ವಾರ್ಷಿಕ ಪರೀಕ್ಷೆಯಲ್ಲಿ ನಮ್ಮ ಮಹಾವಿದ್ಯಾಲಯದಿಂದ ಪರೀಕ್ಷೆಗೆ ಕುಳಿತ ಒಟ್ಟು ವಿದ್ಯಾರ್ಥಿಗಳಲ್ಲಿ 46 ಉನ್ನತ ಶ್ರೇಣಿಯಲ್ಲಿ, 136 ಪ್ರಥಮ ಶ್ರೇಣಿಯಲ್ಲಿ, 24 ದ್ವಿತೀಯ ಶ್ರೇಣಿಯಲ್ಲಿ ತೇರ್ಗಡೆಯಾಗಿ ಮಹಾವಿದ್ಯಾಲಯಕ್ಕೆ ಕೀರ್ತಿ ತಂದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಹಾಗೂ ಬೋಧಕರಿಗೆ ಸಂಸ್ಥೆಯ ಚೇರಮನ್ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪೇಮಾನಂದ ರೋಣದ, ಪದಾಧಿಕಾರಿಗಳಾದ ಪ್ರೊ. ರೋಹಿತ ಒಡೆಯರ್, ಪ್ರೊ. ರಾಹುಲ ಒಡೆಯರ್, ಪ್ರೊ. ಸೈಯದ ಮತಿನ್ ಮುಲ್ಲಾ, ಪ್ರೊ. ಪುನೀತ ದೇಶಪಾಂಡೆ, ಆಡಳಿತಾಧಿಕಾರಿಗಳಾದ ಎಂ.ಸಿ. ಹಿರೇಮಠ ಹಾರ್ದಿಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.



ಹಾವೇರಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪ್ರಚಾರ ಸಭೆಯ ನಡುವಿನ ವಿರಾಮದಲ್ಲಿ ಗಿಡದ ಕೆಳಗೆ ಕಾರ್ಯಕರ್ತರೊಂದಿಗೆ ಕುಳಿತು, ಸಾಮಾನ್ಯ ಕಾರ್ಯಕರ್ತರಂತೆ ಊಟ ಮಾಡುವ ಮೂಲಕ ಸರಳತೆ ಮೆರೆದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka